ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೪

# ಪಟ್ಟಿ – ೦೭

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ: ೨೯ನೇ ನವೆಂಬರ್, ೨೦೧೬

---

## ಸಮೂಹ – II

೧. ಇಂಧನ ಸಚಿವರು.

೨. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೩. ಸಹಕಾರ ಮತ್ತು ಸಕ್ಕರೆ ಸಚಿವರು.

೪. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು.

೫. ಕೃಷಿ ಸಚಿವರು.

೬. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು.

೭. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.

---

## ಪಟ್ಟಣ ಪಂಚಾಯತ್‌ಗಳಲ್ಲಿನ ಸಿ.ಎ. ಸೈಟ್‌ಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ) –**

೬೬೪ (೮೪೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಪಟ್ಟಣ ಪಂಚಾಯತ್ (ಪುರಸಭೆ, ನಗರ ಸಭೆವಾರು ಖಾಲಿ ಸಿ.ಎ.) ಸೈಟ್‌ಗಳು ಮತ್ತು ಲೇಔಟ್‌ವಾರು ವಿವರ ನೀಡುವುದು ;

(ಆ) ಯಾವ ಉದ್ದೇಶಕ್ಕಾಗಿ ಇವುಗಳನ್ನು ಹಂಚಿಕೆ ಮಾಡದೇ ಕಾಯ್ದಿರಿಸಲಾಗಿದೆ ;

(ಇ) ಮುದ್ದೇಬಿಹಾಳ ಪುರಸಭೆಯಲ್ಲಿ ಕಳೆದ ೦೨ ವರ್ಷಗಳಲ್ಲಿ ಯಾವ ಯಾವ ಯೋಜನೆಯಡಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ? (ಪ್ರತಿ ವಾರ್ಡ್‌ವಾರು ವಿವರ ನೀಡುವುದು)

## ತೋಟಗಾರಿಕಾ ವಿಶ್ವವಿದ್ಯಾಲಯದ ಪರಿಪೂರ್ಣ ಮಾಹಿತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ) –**

೬೬೫ (೮೪೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ತೋಟಗಾರಿಕಾ ವಿಜ್ಞಾನಗಳ ವಿಶ್ವ ವಿದ್ಯಾಲಯಕ್ಕೆ ಕಳೆದ ೦೨ ವರ್ಷಗಳಿಂದ ಒದಗಿಸಿರುವ ಅನುದಾನವೆಷ್ಟು ; ಹಾಗೂ ವಿಶೇಷ ಅನುದಾನ ಎಷ್ಟು ;

(ಆ) ಈ ವಿಶ್ವ ವಿದ್ಯಾಲಯದಲ್ಲಿ ಪ್ರಾರಂಭದ ಪ್ರಸ್ತಾವನೆ ಇರುವ ಕೋರ್ಸ್‌ಗಳು ಯಾವುವು ;

(ಇ) ಈ ವಿಶ್ವ ವಿದ್ಯಾಲಯದಡಿ ನಡೆಯುತ್ತಿರುವ ರೈತರಿಗಾಗಿ ಇರುವ ಕಾರ್ಯಕ್ರಮಗಳು ಯಾವುವು ; (ವಿವರ ನೀಡುವುದು)

(ಈ) ಇಲ್ಲಿ ಒದಗಿಸಲಾಗಿರುವಂತಹ ಮೂಲಭೂತ ಸೌಕರ್ಯಗಳ ಕುರಿತು ಸಂಪೂರ್ಣ ವಿವರ ನೀಡುವುದು ;

(ಉ) ವಿದ್ಯಾರ್ಥಿಗಳ ಆರೋಗ್ಯ ದೃಷ್ಟಿಯಿಂದ ಕೈಗೊಂಡ ಕ್ರಮಗಳ ಕುರಿತು ವಿವರ ನೀಡುವುದು ;

(ಊ) ಈ ವಿಶ್ವ ವಿದ್ಯಾಲಯದಲ್ಲಿರುವ ಅಗತ್ಯ ಬೋಧಕ/ಬೋಧಕೇತರರ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಋ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ನಿಟ್ಟಿನಲ್ಲಿ, ಸರ್ಕಾರದ ಕ್ರಮ ಏನು ; ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?

## ವಿಜಯಪುರ ಜಿಲ್ಲೆಗಳಲ್ಲಿನ ಎ.ಪಿ.ಎಂ.ಸಿ.ಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ) –**

೬೬೬ (೮೪೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿರುವ ಒಟ್ಟು ಎ.ಪಿ.ಎಂ.ಸಿ.ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರತಿಯೊಂದು ಎ.ಪಿ.ಎಂ.ಸಿ.ಗಳ ಒಟ್ಟು ವಿಸ್ತೀರ್ಣ ಹಾಗೂ ಅಲ್ಲಿ ಒದಗಿಸಲಾಗಿರುವಂತಹ ಮೂಲಭೂತ ಸೌಕರ್ಯಗಳ ವಿವರ ನೀಡುವುದು ;

(ಇ) ಈ ಎ.ಪಿ.ಎಂ.ಸಿ.ಗಳಲ್ಲಿರುವ ಮಳಿಗೆಗಳ ಸಂಖ್ಯೆ ಎಷ್ಟು ; ಯಾವ ಯಾವ ರೀತಿಯ ವಹಿವಾಟಿಗೆ ಮಳಿಗೆಗಳನ್ನು ಬಾಡಿಗೆಗೆ ನೀಡಲಾಗುವುದು ;

(ಈ) ಖಾಲಿ ಇರುವ ಮಳಿಗೆಗಳ ಸಂಖ್ಯೆ ಎಷ್ಟು ; (ಎಲ್ಲಾ ಎ.ಪಿ.ಎಂ.ಸಿ.ಗಳವಾರು ಮಾಹಿತಿ ನೀಡುವುದು)

(ಉ) ಮಳಿಗೆಗಳನ್ನು ಬಾಡಿಗೆ ಪಡೆಯಬೇಕಾದಲ್ಲಿ ಇರುವ ನಿಯಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿಯಲ್ಲಿ ತೊಗರಿ ''ಟೆಕ್ನಾಲಜಿ ಪಾರ್ಕ್'' ಸ್ಥಾಪಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೬೬೭ (೮೪೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿಯಲ್ಲಿ ತೊಗರಿ "ಟೆಕ್ನಾಲಿಜಿ ಪಾರ್ಕ್" ಅಡಿಯ ಸಮಗ್ರ ತೊಗರಿ ಕೃಷಿ ವ್ಯವಹಾರ ಕೇಂದ್ರವನ್ನು (INTAC-G) ಸ್ಥಾಪಿಸುವ ಯೋಜನೆ ಘೋಷಣೆ ಮಾಡಿ ೩ ವರ್ಷ ಗತಿಸಿದರೂ ಯಾವುದೇ ಬೆಳವಣಿಗೆ ಆಗದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಕಾರಣಗಳನ್ನು ತಿಳಿಸುವುದು;

(ಆ) ತೊಗರಿ ಕಣಜವೆಂದು ಪ್ರಸಿದ್ಧವಾಗಿರುವ ಕಲಬುರಗಿಯಲ್ಲಿ (INTAC-G) ಸ್ಥಾಪಿಸಲು ಸರ್ಕಾರ ಮುಂದಾಗುವುದೇ ; ಇದ್ದಲ್ಲಿ, ಪ್ರಸ್ತುತ ಯೋಜನೆಯ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಸದರಿ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು? (ಮಾಹಿತಿ ನೀಡುವುದು)

## ಕಲಬುರಗಿ ಮಹಾನಗರಕ್ಕೆ ಎರಡನೇ ರಿಂಗ್‌ರೋಡ್ ಮಂಜೂರಾತಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೬೬೮ (೮೫೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮಹಾನಗರಕ್ಕೆ ಎರಡನೇ ರಿಂಗ್‌ರೋಡ್ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಮಂಜೂರಾತಿ ನೀಡಲಾಗಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಎರಡನೇ ರಿಂಗ್‌ರೋಡ್‌ನ್ನು ಎಷ್ಟು ಕಿಲೋಮೀಟರ್ ಉದ್ದ ಹಾಗೂ ಅಗಲ ನಿರ್ಮಿಸಲು ಅಂದಾಜಿಸಲಾಗಿದೆ; ಅದರ ಅಂದಾಜು ವೆಚ್ಚ ಎಷ್ಟು; (ನಕಾಶೆಯೊಂದಿಗೆ ಮಾಹಿತಿ ನೀಡುವುದು)

(ಇ) ಸದರಿ ರಿಂಗ್‌ರೋಡ್‌ಗೆ ಅನುದಾನ ಒದಗಿಸಲಾಗಿದೆಯೇ ಹಾಗೂ ಕಾಮಗಾರಿ ಪ್ರಾರಂಭಿಸಲಾಗಿದೆಯೇ; ಇದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು?

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಇತ್ತೀಚೆಗೆ ಮಳೆಯಿಂದ ಸೇತುವೆಗಳು ಹಾಳಾಗಿರುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೬೬೯ (೮೫೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದಂತೆ ಇತ್ತೀಚೆಗೆ ಮಳೆಯಿಂದ ರಸ್ತೆಗಳು ಹಾಗೂ ಸೇತುವೆಗಳು ಹಾಳಾಗಿ ವಾಹನಗಳ ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಷ್ಟ್ರೀಯ ಹಾಗೂ ರಾಜ್ಯ ರಸ್ತೆಗಳಲ್ಲಿ ಹಾಳಾಗಿರುವ ಸೇತುವೆಗಳು ಯಾವುವು ; ಇದುವರೆಗೂ ಎಷ್ಟು ಸೇತುವೆಗಳನ್ನು ದುರಸ್ಥಿ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಸಾರ್ವಜನಿಕರಿಂದ ಬಂದಿರುವ ಅಹವಾಲುಗಳೆಷ್ಟು ; ಇದರಲ್ಲಿ ಎಷ್ಟು ಕಾಮಗಾರಿಗಳನ್ನು ನಿರ್ವಹಿಸಲಾಗಿದೆ ಹಾಗೂ ಉಳಿದಿರುವ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ದುರಸ್ಥಿ ಮಾಡಲಾಗುವುದು? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ನಬಾರ್ಡ್ ಹಾಗೂ ಸಿ.ಆರ್.ಎಫ್. ಸಂಸ್ಥೆಯಿಂದ ಕೈಗೊಂಡ ರಸ್ತೆ ಕಾಮಗಾರಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೬೭೦ (೮೫೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ನಬಾರ್ಡ್ ಮತ್ತು ಸಿ.ಆರ್.ಎಫ್. ಸಹಾಯಾನುದಾನದಲ್ಲಿ ರಸ್ತೆ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಯೋಜನೆಗಳು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಎಷ್ಟು ಕಿಲೋಮೀಟರ್ ವ್ಯಾಪ್ತಿಯಲ್ಲಿ ರಸ್ತೆಯನ್ನು ಅಭಿವೃದ್ಧಿಪಡಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ರಸ್ತೆ ಅಭಿವೃದ್ಧಿಗಾಗಿ ಭರಿಸಿದ ವೆಚ್ಚದಲ್ಲಿ ನಬಾರ್ಡ್ ಮತ್ತು ಸಿ.ಆರ್.ಎಫ್ ಸಂಸ್ಥೆಯಿಂದ ಪಡೆದ ಸಹಾಯಾನುದಾನವೆಷ್ಟು ಹಾಗೂ ರಾಜ್ಯ ಸರ್ಕಾರದ ಪಾಲೆಷ್ಟು ; (ವಿವರ ನೀಡುವುದು)

(ಈ) ಸದರಿ ಜಿಲ್ಲೆಗಳಲ್ಲಿ ನಬಾರ್ಡ್, ಸಿ.ಆರ್.ಎಫ್ ಹಾಗೂ ರಾಜ್ಯ ಸರ್ಕಾರದಿಂದ ರಸ್ತೆಗಳ ಅಭಿವೃದ್ಧಿಗಾಗಿ ಕೈಗೊಂಡ ಕ್ರಮಗಳು, ಅನುಷ್ಠಾನಗೊಳಿಸಿದ ಯೋಜನೆಗಳ ಬಗ್ಗೆ ವಿವರ ನೀಡುವುದು ಹಾಗೂ ಈ ಸಾಲಿನಲ್ಲಿ ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಅನುಷ್ಠಾನಕ್ಕೆ ತಂದಿರುವ ಯೋಜನೆಗಳಾವುವು ? (ಸಂಪೂರ್ಣ ವಿವರ ನೀಡುವುದು)

## ಬೀದರ್, ಕಲಬರುಗಿ, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ರಾಷ್ಟ್ರೀಯ ಹೆದ್ದಾರಿಗಳ ಪ್ರಗತಿ ಬಗ್ಗೆ

**ಶ್ರೀ ಅಮರನಾಥ ಪಾಟೇಲ್ (ಪದವೀಧರರ ಕ್ಷೇತ್ರ ) –**

೬೭೧ (೮೫೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಹಾಗೂ ಹರಪ್ಪನಹಳ್ಳಿಯಲ್ಲಿ ಕಳೆದ ೪ ವರ್ಷಗಳಲ್ಲಿ

ಮಂಜೂರಾದ, ಪ್ರಗತಿಯಲ್ಲಿರುವ, ಪೂರ್ಣಗೊಂಡ ರಾಷ್ಟ್ರೀಯ ಹೆದ್ದಾರಿಗಳಾವುವು; ರಾಷ್ಟ್ರೀಯ ಹೆದ್ದಾರಿವಾರು, ವೆಚ್ಚವಾರು ಸ್ಪಷ್ಟವಾದ ನಕಾಶೆಯೊಂದಿಗೆ ಸವಿವರವಾದ ಮಾಹಿತಿ ನೀಡುವುದು;

(ಆ) ಸದರಿ ಮೇಲ್ಕಂಡ ಜಿಲ್ಲೆಗಳಲ್ಲಿ ಕೇಂದ್ರಕ್ಕೆ ಸಲ್ಲಿಸಿರುವ ಹೊಸ ಹೆದ್ದಾರಿಗಳ ಪ್ರಸ್ತಾವನೆಗಳಾವುವು? (ಸಂಪೂರ್ಣ ವಿವರ ನೀಡುವುದು)

## ಕೃಷಿ ಭೂಮಿ ಬಗ್ಗೆ

**ಶ್ರೀ ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೭೨ (೮೫೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಪ್ರಸ್ತುತ ಇರುವ ಕೃಷಿ ಭೂಮಿ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಎಕರೆ ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ ಪರಿವರ್ತಿಸಲಾಗಿದೆ; ಈ ರೀತಿಯಾಗಿ ಪರಿವರ್ತಿಸಿದ ಭೂಮಿಯನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗುತ್ತಿದೆ ;

(ಇ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸರ್ಕಾರವು ಎಷ್ಟು ಎಕರೆ ಕೃಷಿಭೂಮಿಯನ್ನು ಸರ್ಕಾರಿ ಯೋಜನೆಗಳಿಗಾಗಿ ಪಡೆದುಕೊಂಡಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ರೀತಿಯಾಗಿ ವಶಪಡಿಸಿಕೊಂಡಿರುವ ಕೃಷಿ ಭೂಮಿಯನ್ನು ಸರ್ಕಾರವು ಯಾವ ಉದ್ದೇಶಕ್ಕಾಗಿ ಬಳಕೆ ಮಾಡುತ್ತಿದೆ ? (ವಿವರ ನೀಡುವುದು)

## ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಮನೆ ನಿರ್ಮಾಣದ ಬಗ್ಗೆ

**ಶ್ರೀ ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೭೩ (೮೫೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮನೆ ಕಟ್ಟಲು ಪರವಾನಿಗೆ ಪಡೆಯುವ ನಿಯಮದಡಿಯಲ್ಲಿ ನೂತನವಾಗಿ ಮನೆಕಟ್ಟಲು ಸರ್ಕಾರ ನಿಗಧಿಪಡಿಸಿರುವ ಶುಲ್ಕ ಎಷ್ಟು ; ಯಾವ ಆಧಾರದ ಮೇಲೆ ಶುಲ್ಕ ವಸೂಲಿ ಮಾಡಲಾಗುವುದು ;

(ಆ) ಮನೆಯ ಪರವಾನಿಗೆಯ ಸಮಾಪ್ತಿಯ (Expiry) ಅವಧಿ ಎಷ್ಟು; ಅವಧಿ ಮುಗಿದ ನಂತರ ನವೀಕರಣಗೊಳಿಸಲು ವಿಧಿಸಲಾಗುವ ಶುಲ್ಕ ಎಷ್ಟು ;

(ಇ) ಪರವಾನಿಗೆಯಲ್ಲಿ ನಿಗಧಿಪಡಿಸಿರುವ ಅವಧಿಯಲ್ಲಿ ಮನೆ ನಿರ್ಮಾಣ ಮಾಡಿಕೊಳ್ಳದವರಿಗೆ ದಂಡ ವಿಧಿಸಲಾಗುತ್ತದೆಯೇ ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ವಸೂಲಾದ ದಂಡವೆಷ್ಟು ;

(ಈ) ದಂಡ ವಸೂಲಿ ಮಾಡಲು ಇರುವ ನಿಯಮ ಮಾನದಂಡಗಳೇನು ?

## ಎ.ಪಿ.ಎಂ.ಸಿ. ತೂಕ ದಾಖಲಾತಿದಾರರ ಬಗ್ಗೆ

**ಶ್ರೀ ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೭೪ (೮೫೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ತೂಕದಾಖಲಾತಿದಾರರಿಗೆ ಕನಿಷ್ಠ ವೇತನವನ್ನು ಕಳೆದ ೬ ತಿಂಗಳುಗಳಿಂದ ವೇತನ ಪಾವತಿಯಾಗದಿರುವುದು ನಿಜವೇ ; ಹಾಗಿದ್ದಲ್ಲಿ, ಕಾರಣಗಳೇನು ;

(ಆ) ರಾಜ್ಯ ಉಚ್ಚ ನ್ಯಾಯಾಲಯದ ರಿಟ್ ಅಪೀಲ್ ಸಂಖ್ಯೆ ೩೫೫೪/೯೫ ದಿನಾಂಕ: ೧೧.೦೪.೧೯೯೬ರ ಆದೇಶದನ್ವಯ ಸರ್ಕಾರವು ಕೈಗೊಂಡ ಕ್ರಮವೇನು ; (ಮಾಹಿತಿ ನೀಡುವುದು)

(ಇ) ಈ ಕಾರ್ಮಿಕ ನೌಕರರಗಳು ಅನೇಕ ವರ್ಷ ಸೇವೆ ಸಲ್ಲಿಸಿದ್ದರೂ, ವೇತನ ನಿಗಧಿ, ಸೇವಾ ಭದ್ರತೆ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಸೇವೆಯಲ್ಲಿದ್ದು ಮೃತರಾದ ತೂಕದಾರರ ಸಂಖ್ಯೆ ಎಷ್ಟು; (ಹೆಸರು, ವಿಳಾಸ ಮಾಹಿತಿ ನೀಡುವುದು)

(ಉ) ಈ ಮೃತ ಕಾರ್ಮಿಕ ನೌಕರರಿಗೆ ಪರಿಹಾರಧನ ನೀಡಲಾಗಿದೆಯೇ ? (ವಿವರ ನೀಡುವುದು)

## ಬೆಂಗಳೂರು–ಹೊನ್ನಾವರ ರಾಷ್ಟ್ರೀಯ ಹೆದ್ದಾರಿ ಬಗ್ಗೆ

**ಶ್ರೀ ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೭೫ (೮೫೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು–ಹೊನ್ನಾವರ ರಾಷ್ಟ್ರೀಯ ಹೆದ್ದಾರಿಯ ಉದ್ದ ಎಷ್ಟು ಕಿಲೋಮೀಟರ್ ಇದೆ ;

(ಆ) ಈ ಹೆದ್ದಾರಿಯ ಎರಡು ಕಡೆಯ ಅಗಲವೆಷ್ಟು ; ಅಗಲದ ಅಳತೆಯನ್ನು ಎಷ್ಟು ಮೀಟರ್‌ಗಳಿಗೆ ನಿಗಧಿಪಡಿಸಲಾಗಿದೆ ;

(ಇ) ಹೊಸದಾಗಿ ಏನಾದರೂ ಈ ರಾಷ್ಟ್ರೀಯ ಹೆದ್ದಾರಿಯ ಅಗಲದಳತೆಯನ್ನು ಹೆಚ್ಚಿಸಲಾಗಿದೆಯೇ ; ಹೆಚ್ಚಿಸಿದ್ದಲ್ಲಿ, ಅಗಲಳತೆಯು ಎಷ್ಟು ಮೀಟರ್ ಅಳತೆಯದ್ದಾಗಿದೆ ; (ವಿವರ ನೀಡುವುದು)

(ಈ) ಅಗಲೀಕರಣದ ಕಾಮಗಾರಿಯು ನಡೆಯುತ್ತಿದೆಯೇ ; ಹಾಗಿದ್ದಲ್ಲಿ, ಎಷ್ಟು ಉದ್ದಳತೆಯ ಹೆದ್ದಾರಿ ಅಗಲೀಕರಣವಾಗಬೇಕಾಗಿದೆ ; (ವಿವರ ನೀಡುವುದು)

(ಉ) ಬೆಂಗಳೂರು–ಹೊನ್ನಾವರ ರಾಷ್ಟ್ರೀಯ ಹೆದ್ದಾರಿಯ ಅಗಲಳತೆಯನ್ನು ಗುರುತಿಸಿ, ಹೆದ್ದಾರಿಯ ಇಕ್ಕೆಲಗಳಲ್ಲಿರುವ ಮಾಲೀಕರುಗಳಿಗೆ ಅವರ ಸರಹದ್ದಿನ ಜಾಗವನ್ನು ಉಳಿಸಿಕೊಳ್ಳಲು ಅನುಕೂಲವಾಗುವಂತೆ ಮಾಹಿತಿ ನೀಡಲಾಗುವುದೇ ? (ವಿವರ ನೀಡುವುದು)

## ಸ್ವಯಂ ಘೋಷಿತ ಆಸ್ತಿ ತೆರಿಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೭೬ (೭೮೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಳಕಲ್ ನಗರಸಭೆಯಲ್ಲಿ ಸ್ವಯಂ ಘೋಷಿತ ಆಸ್ತಿ ತೆರಿಗೆ ಮೂಲಕ ಸಂಗ್ರಹಿಸಿದ ಹಣ ದುರುಪಯೋಗವಾಗಿರುವ ಬಗ್ಗೆ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರಗಳನ್ನು ನೀಡುವುದು)

(ಆ) ಬಾಗಲಕೋಟೆ ಜಿಲ್ಲೆಯ ಇಳಕಲ್ ನಗರಸಭೆಯು ಸರ್ಕಾರದ ಮಾರ್ಗಸೂಚನೆಗಳಿಗೆ ವ್ಯತಿರಿಕ್ತವಾಗಿ ಸ್ವಯಂ ಘೋಷಿತ ಆಸ್ತಿ ತೆರಿಗೆ ವಸೂಲಿ ಮಾಡುತ್ತಿರುವ ದೂರುಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಹೆಚ್ಚುವರಿ ತೆರಿಗೆ ವಸೂಲಿ ಮಾಡಿದ್ದರೆ ಅದನ್ನು ತೆರಿಗೆದಾರರಿಗೆ ಮರುಪಾವತಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ನಿರ್ದಿಷ್ಟ ಕ್ರಮಗಳೇನು ? (ವಿವರ ನೀಡುವುದು)

## ಉತ್ತರ ಕರ್ನಾಟಕ ರೈತರಿಗೆ ರೇಷ್ಮೆ ಸಾಗಾಣಿಕೆಗೆ ಸಂಬಂಧಪಟ್ಟಂತೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೭೭ (೭೭೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ರೈತರಿಗೆ ರೇಷ್ಮೆ ಸಾಗಾಣಿಕೆಗೆ ಸಂಬಂಧಪಟ್ಟಂತೆ ಯಾವುದೇ ಸರಿಯಾದ ಮಾಹಿತಿ ಸಿಗದೇ ಇರುವುದರಿಂದ ರೇಷ್ಮೆ ಸಾಗಾಣಿಕೆ ಸಂಬಂಧಿಸಿದ ಸರ್ಕಾರದ ಯೋಜನೆಗಳು, ಈ ಭಾಗದಲ್ಲಿ ಸಂಪೂರ್ಣವಾಗಿ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಏನು ಕ್ರಮ ಕೈಗೊಂಡಿರುವಿರಿ ; (ಸಂಪೂರ್ಣ ವಿವರ ನೀಡುವುದು)

(ಆ) ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಯಲ್ಲಿ ಎಷ್ಟು ರೇಷ್ಮೆ ತರಬೇತಿ ಕೇಂದ್ರಗಳಿವೆ; ಈಗಾಗಲೇ ಎಷ್ಟು ಜನ ರೈತರಿಗೆ ತರಬೇತಿಯನ್ನು ನೀಡಲಾಗಿದೆ ; (ಹೆಸರು, ವಿಳಾಸ ಸಹಿತ ಸಂಪೂರ್ಣ ಮಾಹಿತಿ ನೀಡುವುದು)

(ಇ) ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗೆ ಸಂಬಂಧಿಸಿದಂತೆ ರೇಷ್ಮೆ ಸಾಗಾಣಿಕೆಗೆ ಎಷ್ಟು ಅನುದಾನ ನಿಗಧಿಪಡಿಸಲಾಗಿತ್ತು; ಇಲ್ಲಿಯವರೆಗೆ ಎಷ್ಟು ಅನುದಾನವನ್ನು ಬಳಕೆ ಮಾಡಲಾಗಿದೆ ? (ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಪೌರಾಡಳಿತ, ಸ್ಥಳೀಯ ಸಂಸ್ಥೆಗಳಿಗೆ ನಿಗಧಿಪಡಿಸಿದ ಅನುದಾನದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೭೮ (೭೭೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೌರಾಡಳಿತ, ಸ್ಥಳೀಯ ಸಂಸ್ಥೆಗಳಿಗೆ ನಿಗಧಿಪಡಿಸಿದ ಅನುದಾನವೆಷ್ಟು ; ಅದರಲ್ಲಿ ಕೇಂದ್ರದ ಹಾಗೂ ರಾಜ್ಯದ ಪಾಲುಗಾರಿಕೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಇಲಾಖೆ ಯೋಜನೆಗಳು, ಸದರಿ ಯೋಜನೆಗಳಿಗೆ ಸಂಬಂಧಿಸಿದಂತೆ ಕೇಂದ್ರ ಹಾಗೂ ರಾಜ್ಯದ ಪಾಲುಗಳೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಪೌರಾಡಳಿತ, ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಕೈಗೊಂಡ ಕಾಮಗಾರಿಗಳೆಷ್ಟು ? (ವಿವರಗಳನ್ನು ನೀಡುವುದು)

## ಕೊಡಗಿ ವಿದ್ಯುತ್ ಸ್ಥಾವರದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೭೯ (೭೭೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲ್ಲೂಕಿನ ಕೊಡಗಿ ಗ್ರಾಮದಲ್ಲಿ ಉಷ್ಣ ವಿದ್ಯುತ್ ಸ್ಥಾವರ ಸ್ಥಾಪನೆಯಾಗಿದ್ದು, ಇದರಿಂದ ಉತ್ಪಾದನೆ ಮಾಡುತ್ತಿರುವ ವಿದ್ಯುತ್ ಎಷ್ಟು ; (ಮಾಹಿತಿ ನೀಡುವುದು)

(ಆ) ಈ ವಿದ್ಯುತ್ ಸ್ಥಾವರದಿಂದ ರಾಜ್ಯಕ್ಕೆ ಎಷ್ಟು ಪ್ರಮಾಣದಲ್ಲಿ ವಿದ್ಯುತ್ ಒದಗಿಸಲಾಗುತ್ತಿದೆ ; ಹಾಗೂ ಸ್ಥಾನಿಕವಾಗಿ ವಿಜಯಪುರ ಜಿಲ್ಲೆಗೆ ಎಷ್ಟು ಪ್ರಮಾಣದಲ್ಲಿ ವಿದ್ಯುತ್ ನೀಡಲಾಗುವುದು ? (ಮಾಹಿತಿ ನೀಡುವುದು)

## ರೈತ ಸಂಪರ್ಕ ಕೇಂದ್ರಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೮೦ (೭೮೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ರೈತ ಸಂಪರ್ಕ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ; ಈಗಾಗಲೇ ಕಾರ್ಯನಿರ್ವಹಿಸುತ್ತಿದ್ದಲ್ಲಿ, ಅಂತಹ ರೈತ ಸಂಪರ್ಕ ಕೇಂದ್ರಗಳನ್ನು ಇನ್ನಷ್ಟು ರೈತ ಸ್ನೇಹಿಯಾಗಿ ಕಾರ್ಯನಿರ್ವಹಿಸುವಂತೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಆ) ರೈತ ಸಂಪರ್ಕ ಕೇಂದ್ರಗಳಲ್ಲಿ ಕೃಷಿ ಇಲಾಖೆ ಅಧಿಕಾರಿಗಳು, ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಹಾಗೂ ರೇಷ್ಮೆ ಇಲಾಖೆಯ ಅಧಿಕಾರಿಗಳನ್ನು ಒಂದೇ ಸೂರಿನಡಿ ಕಾರ್ಯನಿರ್ವಹಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಇ) ಕೈಗೊಳ್ಳದೇ ಇದ್ದಲ್ಲಿ, ಇನ್ನು ಮುಂದೆ ಯಾವ ರೀತಿಯ ಸಮರ್ಪಕ ಕ್ರಮ ಕೈಗೊಳ್ಳಲು ಚಿಂತನೆ ನಡೆಸಿದೆ ; ಇಂತಹ ಯಾವುದೇ ಕ್ರಮ ಕೈಗೊಳ್ಳದೇ ಇದ್ದಲ್ಲಿ, ಅದಕ್ಕೆ ಕಾರಣವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿರುವ ರೈತ ಸಂಪರ್ಕ ಕೇಂದ್ರಗಳು ಕೇವಲ ವ್ಯಾಪಾರಿ ಕೇಂದ್ರಗಳಾಗಿ ಪರಿವರ್ತನೆಗಳಾಗುತ್ತದೆ ಎಂಬ ಆರೋಪಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಆರೋಪಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿರುವ ರೈತ ಸಂಪರ್ಕ ಕೇಂದ್ರಗಳು ರೈತರಿಗೆ ತಾಂತ್ರಿಕತೆ ಉಪಯೋಗಿಸಿ ಮಾಹಿತಿ ವರ್ಗಾವಣೆ ಮಾಡುತ್ತಿವೆಯೇ ; ಹಾಗಿದ್ದಲ್ಲಿ, ಅದಕ್ಕಾಗಿ ಸರ್ಕಾರ/ಇಲಾಖೆ ಯಾವ ರೀತಿಯಾದ ಕೃಷಿ ಪರಿಣಿತರನ್ನು ಉಪಯೋಗಿಸಿಕೊಳ್ಳುತ್ತಿದೆ ; ಅಥವಾ ಬೇರೆ ಇನ್ಯಾವುದೇ ರೀತಿಯ ಮಾರ್ಗಗಳಲ್ಲಿ ಮಾಹಿತಿ ರವಾನೆ ಮಾಡುತ್ತಿದೆಯೇ ? (ಮಾಹಿತಿ ನೀಡುವುದು)

## ರಾಯಚೂರು ಜಿಲ್ಲೆಯ ವಿ.ಎಸ್.ಎಸ್.ಎನ್.ಎಲ್. ಸಹಕಾರ ಸಂಘಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)–**

೬೮೧ (೮೬೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿ.ಎಸ್.ಎಸ್.ಎನ್.ಎಲ್. ಸೊಸೈಟಿಗಳೆಷ್ಟು ;

(ಆ) ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಡಿ.ಸಿ.ಸಿ. (D.C.C.) ಬ್ಯಾಂಕ್‌ನಿಂದ ರೈತರಿಗೆ ನೀಡಿರುವ ಸಾಲದ ಮೊತ್ತ ಎಷ್ಟು ;

(ಇ) ರೈತರ ಸಾಲ ಮನ್ನಾ ಮಾಡುವ ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆಯೇ ;

(ಈ) ರಾಯಚೂರು ಜಿಲ್ಲೆಯಲ್ಲಿ ಸಹಕಾರ ಸಂಘಗಳ ಮುಖಾಂತರ ಬರಬೇಕಾದ ರೈತರ ಸಾಲ ಎಷ್ಟು ?

## ರಾಯಚೂರು ಜಿಲ್ಲೆಗೆ ಲೋಕೋಪಯೋಗಿ ಇಲಾಖೆಯಿಂದ ಮಂಜೂರಾದ ಅನುದಾನದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)–**

೬೮೨ (೮೬೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪, ೨೦೧೪–೧೫, ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಲೋಕೋಪಯೋಗಿ ಇಲಾಖೆಯಿಂದ ವಿವಿಧ ಯೋಜನೆಗಳ ಮುಖಾಂತರ ಮಂಜೂರಾದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಅಪೆಂಡಿಕ್ಸ್–ಸಿ, ಸಿ.ಆರ್.ಎಫ್ (CRF) ಮುಖಾಂತರ ಬಿಡುಗಡೆಯಾದ ಅನುದಾನ ಎಷ್ಟು ?

## ಕಲಬುರಗಿ ಜಿಲ್ಲೆಯ ಪಶು ಆಸ್ಪತ್ರೆಗಳ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) –**

೬೮೩ (೮೯೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಪಶು ಆಸ್ಪತ್ರೆಗಳು ಇವೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಎಲ್ಲಾ ಆಸ್ಪತ್ರೆಗಳಲ್ಲಿ ಪಶು ವೈದ್ಯಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆಯೇ ; ಇಲ್ಲದೇ ಇದ್ದಲ್ಲಿ, ಸೂಕ್ತ ಕಾರಣ ಒದಗಿಸುವುದು ;

(ಇ) ಜಿಲ್ಲೆಯಲ್ಲಿ ಹೊಸ ಪಶು ಆಸ್ಪತ್ರೆಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು ?

## ರಾಯಚೂರು ಜಿಲ್ಲೆಯ ತೋಟಗಾರಿಕೆ ಇಲಾಖೆಗೆ ಸೇರಿರುವ ಭೂಮಿಯ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)–**

೬೮೪ (೮೬೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ತೋಟಗಾರಿಕೆ ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಗೆ ಸೇರಿರುವ ಭೂಮಿ ಎಷ್ಟು; ಅದನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದ ರೈತರು ಬೆಳೆಯುವ ಬೆಳೆಗಳಿಗೆ ಉತ್ತಮ ಮಾರಾಟ ದರ ಒದಗಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)–**

೬೮೫ (೮೬೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಂಗಾಭದ್ರ ಅಚ್ಚುಕಟ್ಟು ಪ್ರದೇಶದಲ್ಲಿ ಭತ್ತದ ಬೆಳೆಗೆ ನೀರಿನ ಕೊರತೆ ಆಗುತ್ತಿದ್ದು, ರೈತರ ಇತರೆ ಪರ್ಯಾಯ ಬೆಳೆಗಳಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯದ ರೈತರು ಬೆಳೆಸುವ ಬೆಳೆಗಳಿಗೆ ಉತ್ತಮ ಮಾರಾಟ ದರ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಕೃಷಿ ವಿಶ್ವವಿದ್ಯಾಲಯ ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕರ್ನಾಟಕ ಸೌರಶಕ್ತಿ ನಿಗಮ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೬೮೬ (೮೯೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಸೌರಶಕ್ತಿ ಅಭಿವೃದ್ಧಿ ನಿಗಮವನ್ನು ಯಾವಾಗ ಸ್ಥಾಪಿಸಲಾಯಿತು ; ಇದರ ಧ್ಯೇಯೋದ್ದೇಶಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಇದರ ಕೇಂದ್ರ ಕಛೇರಿ ಎಲ್ಲಿದೆ, ವಿಳಾಸ ಹಾಗೂ ಹಾಲಿ ಕೆಲಸ ನಿರ್ವಹಿಸುತ್ತಿರುವ ಅಧಿಕಾರಿ ಸಿಬ್ಬಂದಿಗಳು ಯಾರು, ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿಗಳೊಂದಿಗೆ ವಿವರವಾದ ಮಾಹಿತಿ ಕೊಡುವುದು ;

(ಇ) ಸದರಿ ನಿಗಮವನ್ನು ಸರ್ಕಾರವು ಸ್ಥಾಪನೆ ಮಾಡಲು ಕಾರಣಗಳೇನು ; ಇದಕ್ಕೆ ಕೇಂದ್ರ ಸರ್ಕಾರವು ನೀಡಿರುವ ಅನುದಾನವೆಷ್ಟು ? (ವಿವರವಾದ ಮಾಹಿತಿ ನೀಡುವುದು)

## ಸಾರ್ವಜನಿಕ ಉದ್ದಿಮೆಗಳಲ್ಲಿ ನೇಮಕಾತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೬೮೭ (೮೯೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳು ಎಷ್ಟು; ಅವು ಯಾವುವು; ಅವುಗಳನ್ನು ಯಾವ ರೀತಿ ವರ್ಗೀಕರಿಸಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಸಾರ್ವಜನಿಕ ಉದ್ದಿಮೆಗಳು ದಿನಾಂಕ: ೦೧.೦೪.೨೦೦೧ ರಿಂದ ದಿನಾಂಕ: ೦೧.೦೪.೨೦೧೬ರವರೆಗೆ ಎಷ್ಟು ಹುದ್ದೆಗಳನ್ನು ನೇರ/ಇತರೆ ನೇಮಕಾತಿ ಮುಖಾಂತರ ನೇಮಕ ಮಾಡಿಕೊಳ್ಳಲಾಗಿರುತ್ತದೆ ;

(ಅಧಿಸೂಚನೆ ಪ್ರತಿಯೊಂದಿಗೆ ಹುದ್ದೆಯ ಪದನಾಮ, ವೇತನ ಶ್ರೇಣಿ, ವಿದ್ಯಾರ್ಹತೆ, ಮೀಸಲಾತಿ ಹಾಗೂ ಹುದ್ದೆಗಳ ಸಂಖ್ಯೆ ಒಳಗೊಂಡಂತೆ ಉದ್ದಿಮೆವಾರು, ವರ್ಷಾವಾರು ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಸಾರ್ವಜನಿಕ ಉದ್ದಿಮೆಗಳು ದಿನಾಂಕ: ೦೧.೦೪.೨೦೦೧ ರಿಂದ ದಿನಾಂಕ: ೦೧.೦೪.೨೦೧೬ರವರೆಗೆ ಎಷ್ಟು ಹುದ್ದೆಗಳನ್ನು ಅನುಕಂಪ ಆಧಾರದ ಮೇಲೆ ಮಾಡಿಕೊಳ್ಳಲಾಗಿದೆ ; (ಅಭ್ಯರ್ಥಿಯ ವಿವರ, ಹುದ್ದೆಯ ಪದನಾಮ, ಉದ್ದಿಮೆವಾರು, ವರ್ಷವಾರು ಮಾಹಿತಿ ನೀಡುವುದು)

(ಈ) ನೇರ ನೇಮಕಾತಿ ಮಾಡಿಕೊಂಡು ಅನುಕಂಪ ಆಧಾರಿತ ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು ?

## ಸೋಲಾರ್ ವಿದ್ಯುತ್ ಉತ್ಪಾದನೆಗೆ ಪ್ರೋತ್ಸಾಹ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೮೮ (೮೭೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ಸೋಲಾರ್ ವಿದ್ಯುತ್ ಪ್ರಮಾಣ ಎಷ್ಟು ;

(ಆ) ವಿದ್ಯುತ್ ಕೊರತೆ ಸಮಸ್ಯೆ ಇರುವುದರಿಂದ ಸೋಲಾರ್ ವಿದ್ಯುತ್ ಬಳಕೆಗೆ ಪ್ರೋತ್ಸಾಹಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ರೈತರ ಪಂಪ್‌ಸೆಟ್‌ಗಳಿಗೆ ಸೋಲಾರ್ ವಿದ್ಯುತ್‌ನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಸೋಲಾರ್ ವಿದ್ಯುತ್ ಉತ್ಪಾದಿಸುವ ಕಂಪನಿಗಳಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳು ಯಾವುವು ?

## ಕಳಪೆ ಮಟ್ಟದ ರಾಸಾಯನಿಕ ಗೊಬ್ಬರದಿಂದ ಹಾನಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೮೯ (೮೭೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಭಾಗ್ಯ ಯೋಜನೆಯನ್ನು ಎಲ್ಲಾ ಜಿಲ್ಲೆಗಳಲ್ಲಿ ಜಾರಿಗೆ ತರಲಾಗಿದೆಯೇ; ಈ ಯೋಜನೆಗೆ ಮೀಸಲಿರುವ ಅನುದಾನ ಎಷ್ಟು ;

(ಆ) ಕೃಷಿ ಭಾಗ್ಯ ಯೋಜನೆಯಿಂದ ಯಾವ ಯಾವ ಸೌಲಭ್ಯಗಳು ಸಿಗುತ್ತವೆ ; (ವಿವರ ನೀಡುವುದು)

(ಇ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಇದರ ಪ್ರಯೋಜನ ಪಡೆದಿರುವ ಫಲಾನುಭವಿಗಳು ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಸಹಕಾರ ಕ್ಷೇತ್ರದಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೯೦ (೮೭೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳೆಯರು ಸಹಕಾರ ಕ್ಷೇತ್ರದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಉದ್ದೇಶದಿಂದ "ಪ್ರಿಯದರ್ಶಿನಿ" ಯೋಜನೆಯಡಿ ಯಾವ ಯಾವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ;

(ಆ) ಸರ್ಕಾರವೇ ಷೇರುಧನ ನೀಡಿ ಸಹಕಾರ ಸಂಘಗಳಲ್ಲಿ ಎಷ್ಟು ಮಹಿಳೆಯರನ್ನು ಸದಸ್ಯರುಗಳನ್ನಾಗಿ ನೋಂದಾಯಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಯೋಜನೆಯ ಬಗ್ಗೆ ಹೆಚ್ಚು ಪ್ರಚಾರವಿಲ್ಲದಿರುವುದರಿಂದ, ಇದರ ಲಾಭವನ್ನು ಹೆಚ್ಚಿನ ಪ್ರಮಾಣದಲ್ಲಿ ಮಹಿಳೆಯರು ಪಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಮಹಿಳೆಯರ ಪಾಲ್ಗೊಳ್ಳುವಿಕೆ ಸಹಕಾರ ಕ್ಷೇತ್ರದಲ್ಲಿ ಹೆಚ್ಚುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶುಲ್ಕ ವಸೂಲಾತಿ ಕೇಂದ್ರಗಳನ್ನು (Tollgate) ನಿರ್ಮಿಸಲು ಇರುವ ಮಾನದಂಡಗಳ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೬೯೧ (೭೯೪) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ತುಂಬೆ ಹಾಗೂ ಸುರತ್ಕಲ್‌ಗಳಲ್ಲಿ ನಿರ್ಮಿಸಿರುವ ಶುಲ್ಕ ವಸೂಲಾತಿ ಕೇಂದ್ರಗಳನ್ನು (Tollgate) ವೈಜ್ಞಾನಿಕವಾಗಿ ನಿರ್ಮಿಸದಿರುವುದರಿಂದ ಪ್ರಯಾಣಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಶುಲ್ಕ ಕೇಂದ್ರಗಳನ್ನು ನಿರ್ಮಿಸಲು ಲಭ್ಯವಿರುವ ಮಾನದಂಡಗಳನ್ನು ಅನುಸರಿಸದಿರಲು ಕಾರಣಗಳೇನು ;

(ಇ) ಪ್ರಯಾಣಿಕರಿಗೆ ತೊಂದರೆ ಆಗದಂತೆ ಈ ಶುಲ್ಕ ಕೇಂದ್ರಗಳನ್ನು ಪುನರ್ ನಿರ್ಮಿಸಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದೊಂದಿಗೆ ವ್ಯವಹರಿಸಿ ಕ್ರಮ ಕೈಗೊಳ್ಳಲಾಗುವುದೇ ?

## ಸಕ್ಕರೆ ಕಾರ್ಖಾನೆಗಳ ಸುಧಾರಣೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೬೯೨ (೭೯೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸಕ್ಕರೆ ಕಾರ್ಖಾನೆಗಳಿವೆ ;

(ಆ) ಈ ಕಾರ್ಖಾನೆಗಳಲ್ಲಿ ಸರ್ಕಾರಿ ಸ್ವಾಮ್ಯದ, ಸಹಕಾರಿ ಸ್ವಾಮ್ಯದ ಹಾಗೂ ಇತರೆ ವರ್ಗಗಳಲ್ಲಿರುವ ಕಾರ್ಖಾನೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಆ ಪೈಕಿ ಲಾಭದಲ್ಲಿ ನಡೆಯುತ್ತಿರುವ ಹಾಗೂ ನಷ್ಟ ಅನುಭವಿಸುತ್ತಿರುವ ಕಾರ್ಖಾನೆಗಳ ಸಂಖ್ಯೆಗಳೆಷ್ಟು ; (ವಿವರ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಈ ಕಾರ್ಖಾನೆಗಳು ಉತ್ಪಾದಿಸಿದ ಸಕ್ಕರೆ ಹಾಗೂ ರಫ್ತು ಮಾಡಲಾದ ಪ್ರಮಾಣ ಎಷ್ಟು ; (ವಿವರ ನೀಡುವುದು)

(ಉ) ನಷ್ಟದಲ್ಲಿ ನಡೆಯುತ್ತಿರುವ ಕಾರ್ಖಾನೆಗಳ ಸುಧಾರಣೆಗೆ ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ ?

## ರಾಜ್ಯದಲ್ಲಿ ಈರುಳ್ಳಿ ಬೆಲೆ ಕುಸಿತದಿಂದ ರೈತರು ಸಂಕಷ್ಟಕ್ಕೀಡಾಗಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೬೯೩ (೭೯೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಈರುಳ್ಳಿ ಬೆಲೆ ಕುಸಿತಗೊಂಡು ರೈತರು ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ರೈತರು ಈ ಬಾರಿ ಬೃಹತ್ ಪ್ರಮಾಣದಲ್ಲಿ ಈರುಳ್ಳಿ ಬೆಳೆದಿದ್ದರೂ, ಹೊರ ರಾಜ್ಯಗಳಿಂದ ಈರುಳ್ಳಿ ಮಾರುಕಟ್ಟೆಗೆ ಬರುತ್ತಿರುವುದನ್ನು ತಡೆಯಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ ;

(ಇ) ಈರುಳ್ಳಿ ಬೆಳೆದ ರೈತರಿಗೆ ಉತ್ಪಾದನೆ ಖರ್ಚು ಕೂಡ ಬಾರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಜ್ಯದಲ್ಲಿ ಮುಂಗಾರು ಮತ್ತು ಹಿಂಗಾರು ಮಳೆ ವಿಫಲವಾಗಿರುವುದರಿಂದ ವಿದ್ಯುತ್ ಉತ್ಪಾದನೆ ಕೊರತೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೬೯೪ (೭೯೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಂಗಾರು ಮತ್ತು ಹಿಂಗಾರು ಮಳೆ ವಿಫಲವಾಗಿರುವುದರ ಹಿನ್ನಲೆಯಲ್ಲಿ, ವಿದ್ಯುತ್ ಉತ್ಪಾದನಾ ಕೊರತೆಗೆ ಕಾರಣವಾಗಿರುವುದರಿಂದ ಇಲಾಖೆಯಲ್ಲಿ ವಿದ್ಯುತ್ ಉತ್ಪಾದನೆಯಲ್ಲಿ ಆಗಿರುವ ಕೊರತೆಯ ಪ್ರಮಾಣವನ್ನು ಅಂದಾಜು ಮಾಡಲಾಗಿದೆಯೇ ;

(ಆ) ಈ ಕುರಿತಾಗಿ ರಾಜ್ಯ ಸರ್ಕಾರ ರಾಜ್ಯದ ಜನತೆಗೆ ವಿದ್ಯುತ್ ಒದಗಿಸುವುದರ ಬಗ್ಗೆ ಏನು ಕ್ರಮ ಕೈಗೊಂಡಿದೆ ;

(ಇ) ವಿದ್ಯುತ್ ಕೊರತೆಯಿಂದ ಉಂಟಾಗುವ ನಷ್ಟಗಳನ್ನು ನಿವಾರಿಸಲು (ಕೃಷಿ, ಕೈಗಾರಿಕೆ, ವಾಣಿಜ್ಯ ಹಾಗೂ ಇತರೆ ಕ್ಷೇತ್ರಗಳು) ಮುಂಜಾಗ್ರತಾ ಕ್ರಮವಾಗಿ ವಿದ್ಯುತ್ ಖರೀದಿಗೆ ಏನು ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯದಲ್ಲಿ ಸಾವಯವ ಕೃಷಿ ಉತ್ತೇಜನ ಕಾರ್ಯಕ್ರಮಗಳ ಅನುಷ್ಠಾನದ ವಿವರಗಳ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೯೫ (೮೦೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಾವಯವ ಕೃಷಿ ಮಿಷನ್ ಹಮ್ಮಿಕೊಂಡ ಕ್ರಿಯಾಯೋಜನೆಗಳು ಯಾವುವು ಮತ್ತು ಅನುಷ್ಠಾನದ ಕುರಿತಾದ ವಿವರಗಳನ್ನು ಒದಗಿಸುವುದು ;

(ಆ) ಸಮಗ್ರ ಕೃಷಿ ಉತ್ಪಾದನೆ ಮತ್ತು ನಿರ್ವಹಣೆಯ ಪದ್ಧತಿಯಾದ ಸಾವಯವ ಕೃಷಿಗೆ ಉತ್ತೇಜನ ಕಾರ್ಯಕ್ರಮಗಳ ಅಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಇಲಾಖೆಯು ಅನುಷ್ಠಾನಗೊಳಿಸಿದ ಕಾರ್ಯಕ್ರಮಗಳು ಮತ್ತು ಗುರಿ–ಸಾಧನೆಗಳು ಯಾವುವು ; (ವಿವರ ನೀಡುವುದು)

(ಇ) ಹೈದ್ರಾಬಾದ್–ಕರ್ನಾಟಕ ಪ್ರದೇಶ ವ್ಯಾಪ್ತಿಯಲ್ಲಿ ಸಾವಯುವ ಕೃಷಿ ಮಿಷನ್ ಕಾರ್ಯಾನುಷ್ಠಾನದ ತಾಲ್ಲೂಕುವಾರು ವಿವರಗಳನ್ನು ನೀಡುವುದು ?

## ಹೈದ್ರಾಬಾದ್–ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ತೋಟಗಾರಿಕಾ ಬೆಳೆಗಳ ಅಭಿವೃದ್ಧಿ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೯೬ (೮೦೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶ ವ್ಯಾಪ್ತಿಯಲ್ಲಿ ಬೆಳೆಯುವ ತೋಟಗಾರಿಕಾ ಉತ್ಪನ್ನಗಳು ಮತ್ತು ಸಾಂಪ್ರದಾಯಿಕ ಮತ್ತು ಆಧುನಿಕ ತೋಟಗಾರಿಕೆಗಳನ್ನು ಅಭಿವೃದ್ಧಿಪಡಿಸುವ ದಿಸೆಯಲ್ಲಿ ಇಲಾಖೆಯು ಹಮ್ಮಿಕೊಂಡ ಯೋಜನೆಗಳು ಯಾವುವು ;

(ಆ) ಸದರಿ ಪ್ರದೇಶದ ವಿವಿಧ ತೋಟಗಾರಿಕಾ ಬೆಳೆಗಳ ವಾರ್ಷಿಕ ಪ್ರಮಾಣ ಮತ್ತು ಬೆಳೆಗಳ ಅಭಿವೃದ್ಧಿಗಾಗಿ ಪ್ರದೇಶಾನುಸಾರ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಾವುವು ; (ವಿವರ ನೀಡುವುದು)

(ಇ) ಈ ಪ್ರದೇಶಗಳಲ್ಲಿ ಹನಿ ನೀರಾವರಿ ಕೇಂದ್ರ ವಲಯದ ಯೋಜನೆಯ ಸೌಲಭ್ಯದಡಿಯಲ್ಲಿ ಇಲಾಖೆಯವರು ಜಾರಿಗೊಳಿಸಿದ ಯೋಜನೆಗಳು ಹಾಗೂ ಗುರಿ ಸಾಧನೆಗಳ ವಿವರ ನೀಡುವುದು ?

## ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಕೃಷಿ ತಂತ್ರಜ್ಞಾನ ಅಳವಡಿಕೆ ಕ್ರಮಗಳು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೯೭ (೮೦೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ಹೈದ್ರಾಬಾದ್–ಕರ್ನಾಟಕ ಪ್ರದೇಶಗಳಲ್ಲಿ ಕೃಷಿ ಕ್ಷೇತ್ರದ ಹೆಚ್ಚಿನ ಅಭಿವೃದ್ಧಿಗಾಗಿ ತಂತ್ರಜ್ಞಾನ ಅಳವಡಿಕೆಯ ಕುರಿತಾದ ಸರ್ಕಾರದ ಕ್ರಿಯಾ ಯೋಜನೆಗಳು ಯಾವುವು ;

(ಆ) ಹೈದ್ರಾಬಾದ್–ಕರ್ನಾಟಕ ಪ್ರದೇಶಗಳಲ್ಲಿರುವ ಕೃಷಿ ಕೈಗಾರಿಕಾ ತರಬೇತು ಸಂಸ್ಥೆಗಳ ಅನುಷ್ಠಾನದ ಕುರಿತ ಸರ್ಕಾರದ ಪ್ರಸ್ತಾವನೆಗಳು ಮತ್ತು ಕ್ರಿಯಾ ಯೋಜನೆಗಳು ಯಾವುವು;

(ಇ) ರಾಜ್ಯದಲ್ಲಿ ಕೃಷಿ ಕ್ಷೇತ್ರದಲ್ಲಿ ಅತ್ಯಾಧುನಿಕ ತಂತ್ರಜ್ಞಾನವನ್ನು ಸಮೀಕರಿಸುವಲ್ಲಿ ತರಬೇತು ಸಂಸ್ಥೆಗಳ ಪಾತ್ರವು ಬಹುಮುಖ್ಯವಾಗಿದ್ದು, ಆ ಕುರಿತ ಸಕಾಲಿಕ ಕ್ರಮಗಳ ಕುರಿತ ಇಲಾಖಾ ಕ್ರಮಗಳು ಯಾವುವು?

## ಯಡಿಯೂರಿನಿಂದ ಮಂಡ್ಯವರೆಗಿನ ರಾಜ್ಯ ಹೆದ್ದಾರಿಯ ಕಾಮಗಾರಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ ) –**

೬೮ (೮೧೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಡಿಯೂರಿನಿಂದ ಮಂಡ್ಯವರೆಗಿನ ರಾಜ್ಯ ಹೆದ್ದಾರಿ ಕಾಮಗಾರಿಗೆ ಮಂಜೂರಾಗಿರುವ ಹಣ ಎಷ್ಟು ;

(ಆ) ಈ ಕಾಮಗಾರಿಯ ಟೆಂಡರ್ ಆಗಿದೆಯೇ; ಟೆಂಡರ್ ಪಡೆದಿರುವವರು ಯಾರು ಹಾಗೂ ಯಾವ ದಿನಾಂಕದಿಂದ ಪಡೆದಿದ್ದಾರೆ ;

(ಇ) ಈ ಕಾಮಗಾರಿಯು ಮಂದಗತಿಯಲ್ಲಿ ನಡೆಯುತ್ತಿದ್ದು, ಇದರಿಂದ ಸಾರ್ವಜನಿಕರ ಸಂಚಾರಕ್ಕೆ ತುಂಬಾ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು; ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಹೊಸದಾಗಿ ಸೃಜಿಸಿದ ಪೌರಾಡಳಿತ ಸಂಸ್ಥೆಗಳಿಗೆ ಮೂಲ ಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೯೯ (೮೪೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸದಾಗಿ ಸೃಜಿಸಲಾದ ಮತ್ತು ಮೇಲ್ದರ್ಜೆಗೇರಿಸಲಾದ ಪಟ್ಟಣ ಪಂಚಾಯತ್, ಪುರಸಭೆ ಮತ್ತು ನಗರ ಸ್ಥಳೀಯ ಸಂಸ್ಥೆಗಳಾವುವು ;

(ಆ) ಹೊಸದಾಗಿ ಸೃಜಿಸಿದ ಮತ್ತು ಮೇಲ್ದರ್ಜೆಗೇರಿಸಲಾದ ನಗರ ಸ್ಥಳೀಯ ಸಂಸ್ಥೆಗಳಿಗೆ ಮೂಲ ಸೌಕರ್ಯಕ್ಕಾಗಿ ಇದುವರೆಗೂ ಕಾಯ್ದಿರಿಸಿದ–ಬಿಡುಗಡೆ ಮಾಡಿದ, ಖರ್ಚು ಮಾಡಲಾದ ಅನುದಾನವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಸ್ಥಳೀಯ ಸಂಸ್ಥೆಗಳಿಗೆ ಮಂಜೂರಾದ ಹುದ್ದೆಗಳೆಷ್ಟು; (ಹುದ್ದೆವಾರು ವಿವರ ನೀಡುವುದು) ಹೊಸದಾಗಿ ನೇಮಕಾತಿ ಮಾಡಲಾಗಿದೆಯೇ; ನೇಮಕಾತಿ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಈ) ಈ ಎಲ್ಲಾ ಸ್ಥಳೀಯ ಸಂಸ್ಥೆಗಳಿಗೆ ಅಗತ್ಯ ಅನುದಾನ ಒದಗಿಸುವ ಬಗ್ಗೆ ಹಾಗೂ ಮಂಜೂರಾದ ಹುದ್ದೆ ನೇಮಕಾತಿ ಮಾಡುವ ಬಗ್ಗೆ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ಕರಾವಳಿಯ ಬಂದರು ಮತ್ತು ಜಟ್ಟಿ ನಿರ್ಮಾಣ ಕಾಮಗಾರಿಯ ಪ್ರಗತಿಯಲ್ಲಿ ಕುಂಠಿತದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೭೦೦ (೮೪೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಕರಾವಳಿಯ ಬಂದರು ಮತ್ತು ಜಟ್ಟಿ ನಿರ್ಮಾಣಕ್ಕಾಗಿ ಮಂಜೂರಾದ ಕಾಮಗಾರಿಗಳಾವುವು ; (ಮಂಜೂರಾದ ವರ್ಷ, ಕಾಮಗಾರಿ ಮೊತ್ತ, ಕಾಮಗಾರಿಯ ಹಂತದ ವಿವರ ನೀಡುವುದು)

(ಆ) ಕಾಮಗಾರಿ ಮಂಜೂರಾಗಿದ್ದರೂ, ಸದರಿ ಕಾಮಗಾರಿಯನ್ನು ಪ್ರಾರಂಭಿಸದೇ ಇರುವುದು ನಿಜವೆ ;

(ಇ) ಬಂದರು, ಜಟ್ಟಿ ನಿರ್ಮಾಣ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಕುಂಠಿತವಾಗಿದ್ದು, ಶೀಘ್ರವಾಗಿ ಕಾಲಮಿತಿಯಲ್ಲಿ ಕಾಮಗಾರಿಯನ್ನು ಮುಕ್ತಾಯಗೊಳಿಸಲು ಹಾಗೂ ಈ ಮೂಲಕ ಮೀನುಗಾರರ ಹಿತಕಾಪಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ಒದಗಿಸುವುದು)

## ಉಡುಪಿ ಗಂಗೊಳ್ಳಿಯ ಬ್ರೇಕ್‌ವಾಟರ್ ಕಾಮಗಾರಿ ಪ್ರಾರಂಭಿಸದೇ ಇರುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೭೦೧ (೮೪೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕಿನ ಗಂಗೊಳ್ಳಿ ಬ್ರೇಕ್ ವಾಟರ್ ನಿರ್ಮಾಣ ಕಾಮಗಾರಿ ಮಂಜೂರಾತಿ ದೊರಕಿ ಟೆಂಡರ್ ಮುಗಿದು ಹಲವು ತಿಂಗಳು ಸಂದರೂ, ಕಾಮಗಾರಿಗೆ ಚಾಲನೆ ನೀಡದಿರುವುದು ನಿಜವೇ ;

(ಆ) ಸದರಿ ಬ್ರೇಕ್ ವಾಟರ್ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿದೆ; ಯೋಜನೆಯ ನಿರೀಕ್ಷಿತ ಮೊತ್ತವೆಷ್ಟು ; (ಯೋಜನೆಯ ಸಂಪೂರ್ಣ ವಿವರ ನೀಡುವುದು)

(ಇ) ಬ್ರೇಕ್ ವಾಟರ್ ನಿರ್ಮಾಣ ಕಾಮಗಾರಿಯ ಗುತ್ತಿಗೆ ಪಡೆದ ಸಂಸ್ಥೆ ಯಾವುದು ;

(ಈ) ಕುಂದಾಪುರ ತಾಲ್ಲೂಕಿನ ಗಂಗೊಳ್ಳಿ ಬಂದರಿನಿಂದ ಕಾರ್ಯಾಚರಿಸುವ ನಾಲ್ಕು ನೂರಕ್ಕೂ ಮಿಕ್ಕ ಬೋಟುಗಳಲ್ಲಿ ಅನೇಕ ಬೋಟುಗಳು ಅಳಿವೆಯ ಹೂಳಿನಿಂದ ಅಪಘಾತಕ್ಕೀಡಾಗಿ ಲಕ್ಷಾಂತರ ರೂಪಾಯಿ ನಷ್ಟಕ್ಕೀಡಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬ್ರೇಕ್ ವಾಟರ್ ನಿರ್ಮಾಣ ಕಾಮಗಾರಿಯನ್ನು ಕಾಲಮಿತಿಯಲ್ಲಿ ಮುಕ್ತಾಯಗೊಳಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಲೋಕೋಪಯೋಗಿ ಇಲಾಖೆಯ ಮರಳುಗಾರಿಕೆ ಮತ್ತು ರಸ್ತೆ ಶುಲ್ಕದ ವಸೂಲಾದ ಮೊತ್ತದ ಒಂದು ಭಾಗವನ್ನು ಸ್ಥಳೀಯ ಸಂಸ್ಥೆಗೆ ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೭೦೨ (೮೪೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಡಿ ರಾಜ್ಯದಲ್ಲಿರುವ ರಸ್ತೆ ಶುಲ್ಕ ಸಂಗ್ರಹಣವಿರುವ ರಸ್ತೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಲೋಕೋಪಯೋಗಿಯ ರಾಷ್ಟ್ರೀಯ ಹೆದ್ದಾರಿಗಳಲ್ಲೂ ಸಂಗ್ರಹವಾದ ಒಟ್ಟು ರಸ್ತೆ ಸುಂಕವೆಷ್ಟು; ಇದರಲ್ಲಿ ಸರ್ಕಾರಕ್ಕೆ ಜಮೆಯಾದ ಮೊತ್ತವೆಷ್ಟು ;

(ಇ) ಲೋಕೋಪಯೋಗಿ ಇಲಾಖೆಯಿಂದ ಮರಳುಗಾರಿಕೆ ಸಂಬಂಧ ವಸೂಲಾದ ರಾಜಧನದ ಮೊತ್ತವೆಷ್ಟು; (ಕಳೆದ ೫ ವರ್ಷದ ಜಿಲ್ಲೆ–ತಾಲ್ಲೂಕುವಾರು ವಿವರ ನೀಡುವುದು)

(ಈ) ರಾಜಧನದ ಎಷ್ಟು ಮೊತ್ತವನ್ನು ಸ್ಥಳೀಯ ಸರ್ಕಾರಕ್ಕೆ ನೀಡುವ ಬಗ್ಗೆ ಆದೇಶ ನಿಯಮಗಳಿವೆ; (ಆದೇಶದ ಪ್ರತಿ ಒದಗಿಸುವುದು) ಇದುವರೆಗೆ ಸ್ಥಳೀಯ ಸಂಸ್ಥೆಗಳಿಗೆ ಪಾವತಿಸಿದ ವಿವರ ಒದಗಿಸುವುದು ;

(ಉ) ಮರುಳುಗಾರಿಕೆ ರಾಜಧನದಂತೆ, ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿ ರಸ್ತೆಗಳ ಸುಂಕ ವಸೂಲಾತಿ ಮೊತ್ತದಲ್ಲಿನ ಒಂದು ಭಾಗವನ್ನು ಸಂಸ್ಥೆಗಳಿಗೆ ನೀಡುವ ಬಗ್ಗೆ ನಿಯಮಾವಳಿ ರೂಪಿಸಲಾಗಿದೆಯೇ ; (ವಿವರ ನೀಡುವುದು)

(ಊ) ವಸೂಲಾದ ರಸ್ತೆ ಶುಲ್ಕದ ಒಟ್ಟು ಮೊತ್ತದ ಒಂದು ಪಾಲು ಸಂಬಂಧಿತ ಸ್ಥಳೀಯ ಸಂಸ್ಥೆಗಳಿಗೆ ನೀಡುವ ಬಗ್ಗೆ ನಿಯಮಾವಳಿ ರೂಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ, ನಿಯಮಾವಳಿ ರೂಪಿಸಿ, ಸ್ಥಳೀಯ ಸಂಸ್ಥೆಗೆ ಶುಲ್ಕದ ಮೊತ್ತ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೆ ; ಈ ಬಗ್ಗೆ ಸರ್ಕಾರದ ನಿಲುವೇನು ; ಯಾವಾಗ ಕ್ರಮ ಕೈಗೊಳ್ಳಲಿದೆ ;

(ಋ) ಈಗಾಗಲೇ ಇರುವ ನಿಯಮದಂತೆ ಮರಳುಗಾರಿಕೆ ಸಂಬಂಧ ವಸೂಲಾದ ಮೊತ್ತದಲ್ಲಿ ಶೇಕಡಾ ೨೫ರಷ್ಟು ಸ್ಥಳೀಯ ಸಂಸ್ಥೆಗೆ ನೀಡುವ ಬಗ್ಗೆ ಸರ್ಕಾರ ಯಾವಾಗ ಕ್ರಮ ಕೈಗೊಳ್ಳಲಿದೆ ? (ವಿವರ ನೀಡುವುದು)

## ಭತ್ತದ ಬೆಂಬಲ ಬೆಲೆ ಮತ್ತು ಬೆಳೆ ಕಟಾವು ಯಂತ್ರದ ದುಬಾರಿ ಬಾಡಿಗೆ ನಿಯಂತ್ರಣದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೨೦೩ (೮೪೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭತ್ತಕ್ಕೆ ಬೆಂಬಲ ಬೆಲೆ ಘೋಷಿಸಲಾಗಿದೆಯೇ ;

(ಆ) ಇಲ್ಲವಾದಲ್ಲಿ, ಯಾವಾಗ ಭತ್ತದ ಬೆಂಬಲ ಬೆಲೆ ಘೋಷಿಸಲಾಗುವುದು ;

(ಇ) ಭತ್ತದ ಬೆಳೆ ಕಟಾವು ಹಂತದಲ್ಲಿದ್ದು, ಕೃಷಿಕರ ಹಿತ ಕಾಪಾಡುವ ನಿಟ್ಟಿನಲ್ಲಿ ಭತ್ತದ ಬೆಲೆ ಕುಸಿತ ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ;

(ಈ) ಕರಾವಳಿಯ ಭಾಗದಲ್ಲಿ ಕೂಲಿಗಾರರ ಸಮಸ್ಯೆಯಿಂದಾಗಿ ಬೆಳೆ ಕಟಾವು ಯಂತ್ರವನ್ನು ಅವಲಂಭಿಸಿದ್ದು ದುಬಾರಿ ಬಾಡಿಗೆ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಭತ್ತದ ಬೆಳೆ ಕಟಾವು ಯಂತ್ರದ ದುಬಾರಿ ಬಾಡಿಗೆ ನಿಯಂತ್ರಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಊ) ಭತ್ತಕ್ಕೆ ಬೆಂಬಲ ಬೆಲೆ ಘೋಷಣೆ ಮತ್ತು ಬೆಳೆ ಕಟಾವು ಯಂತ್ರದ ಬಾಡಿಗೆ ನಿಯಂತ್ರಣಕ್ಕೆ ಭತ್ತದ ಕೃಷಿಕರ ಹಿತ ಕಾಪಾಡಲು ಸರ್ಕಾರ ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಿದೆ ?

## ರಾಜ್ಯದಲ್ಲಿ ಕಬ್ಬಿಗೆ ವೈಜ್ಞಾನಿಕ ಬೆಲೆಯಿಲ್ಲದ್ದು ಹಾಗೂ ಕಾರ್ಖಾನೆಗಳು ಸಕಾಲದಲ್ಲಿ ಹಣ ಪಾವತಿಸುತ್ತಿಲ್ಲದ್ದರಿಂದ ಕಬ್ಬು ಬೆಳೆಯಲು ಹಿಂದೇಟು ಹಾಕುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೦೪ (೮೬೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಬ್ಬಿನ ಬೆಳೆಗೆ ನೀರಿನ ಕೊರತೆ, ರೋಗಬಾಧೆ, ವೈಜ್ಞಾನಿಕ ಬೆಲೆ ಇಲ್ಲದಿರುವುದರಿಂದ ಹಾಗೂ ಕಾರ್ಖಾನೆಗಳು ಕಬ್ಬು ಪಡೆದು ಹಣ ಪಾವತಿಸಲು ವಿಳಂಬ ಮಾಡುತ್ತಿರುವುದು ಮುಂತಾದ ಕಾರಣಗಳಿಂದ ರೈತರು ಕಬ್ಬು ಬೆಳೆ ಬೆಳೆಯಲು ಹಿಂದೇಟು ಹಾಕುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಬ್ಬು ಬೆಳೆಗಾರರಿಗೆ ಪ್ರೋತ್ಸಾಹ ನೀಡಲು ಏನು ಕ್ರಮಗಳನ್ನು ಕೈಗೊಳ್ಳಲಾಗುವುದು ; ಕಬ್ಬು ಬೆಳೆಯುವುದರಲ್ಲಿ ನಮ್ಮ ರಾಜ್ಯವು ದೇಶದ ಎಷ್ಟನೇ ಸ್ಥಾನದಲ್ಲಿದೆ ;

(ಇ) ೨೦೧೪–೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಬೆಳೆಯಲಾಗಿತ್ತು; ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಬೆಳೆ ಬೆಳೆಯಲಾಗಿದೆ ;

(ಈ) ಸರ್ಕಾರವು ರೈತರ ಕಬ್ಬು ಬೆಳಗೆ ಪ್ರತಿ ಟನ್‌ಗೆ ವೈಜ್ಞಾನಿಕವಾಗಿ ಎಷ್ಟು ಬೆಲೆ ನಿಗಧಿ ಪಡಿಸಿದೆ ಈ ವಿಚಾರವಾಗಿ ಸರ್ಕಾರ ಏನೆಲ್ಲಾ ಕ್ರಮಗಳನ್ನು ಕೈಗೊಂಡಿದೆ; ಇದು ಎಂದಿನಿಂದ ಜಾರಿಯಾಗುವುದು; ಕಾರ್ಖಾನೆಗಳು

ರೈತರ ಕಬ್ಬಿನ ಬಾಕಿ ಹಣ ಪಾವತಿಸದೇ ವರ್ಷಾನುಗಟ್ಟಲೇ ಅಲೆಸುತ್ತಿರುವವರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗುವುದು; ರೈತರಿಗೆ ಪಾವತಿಸಲು ಬಾಕಿ ಉಳಿಸಿಕೊಂಡಿರುವ ಮೊತ್ತವೆಷ್ಟು ; ಯಾವಾಗ ಪೂರ್ಣ ಪಾವತಿಸಲಾಗುವುದು ?

## ರೈತರ ಹಳೆಯ ಕೃಷಿ ಪಂಪ್‌ಸೆಟ್ಟುಗಳನ್ನು ಬದಲಾಯಿಸಿ ಹೆಚ್ಚು ಕಾರ್ಯಕ್ಷಮತೆಯ ಹೊಸ ಪಂಪ್‌ಸೆಟ್ಟುಗಳು ನೀಡುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೨೦೫ (೮೭೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರ ಹಳೆಯ ಕೃಷಿ ಪಂಪ್‌ಸೆಟ್‌ಗಳನ್ನು ಬದಲಾಯಿಸಿ ಹೆಚ್ಚು ಕಾರ್ಯಕ್ಷಮತೆ ಹೊಂದಿರುವ ಹೊಸ ಪಂಪ್‌ಸೆಟ್‌ಗಳನ್ನು ರೈತರಿಗೆ ವಿತರಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಯೋಜನೆ ಪಡೆಯಲು ಇರುವ ಮಾನದಂಡಗಳೇನು ;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಜನ ರೈತರು ಈ ಯೋಜನೆಗೆ ಒಳಪಡುತ್ತಾರೆ ; ಈ ಕುರಿತು ಸಮೀಕ್ಷೆ ನಡೆಸಲಾಗಿದೆಯೇ; ಇದಕ್ಕೆ ತಗಲುವ ಅಂದಾಜು ಮೊತ್ತವೆಷ್ಟು ;

(ಈ) ಈ ಯೋಜನೆಯನ್ನು ಯಾವ ಕಾಲಮಿತಿಯಲ್ಲಿ ರೈತರಿಗೆ ತಲುಪಿಸಲಾಗುವುದು ;

(ಉ) ಇದರಿಂದ ಯಾವ ಪ್ರಮಾಣದಲ್ಲಿ ವಿದ್ಯುತ್ ಉಳಿತಾಯವಾಗಲಿದೆ ?

## ರಾಜ್ಯದ ರೈತರ ಕಬ್ಬು ಬೆಳೆಗೆ ಹನಿ ನೀರಾವರಿ ಯೋಜನೆ ಅಳವಡಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೨೦೬ (೮೭೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕಬ್ಬು ಬೆಳೆಯುವ ರೈತರಿಗೆ ಹನಿ ನೀರಾವರಿ ಅಳವಡಿಸಿಕೊಡುವ ವಿಚಾರ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಹನಿ ನೀರಾವರಿ ಯೋಜನೆಯನ್ನು ಕಲ್ಪಿಸಿಕೊಡಲು ನಿರ್ಧರಿಸಲಾಗಿದೆ; ಇದರ ಕ್ರಿಯಾ ಯೋಜನೆಯನ್ನು ತಯಾರಿಸಲಾಗಿದೆಯೇ; ಇದರ ಅಂದಾಜು ಮೊತ್ತ ಎಷ್ಟು ;

(ಇ) ಹನಿ ನೀರಾವರಿ ಸೌಲಭ್ಯ ಕಲ್ಪಿಸಿಕೊಳ್ಳಲು ಇರುವ ಮಾನದಂಡಗಳೇನು; ಇದರಿಂದ ರೈತರಿಗೆ ಆಗುವ ಪ್ರಯೋಜನವೇನು ;

(ಈ) ಜಿಲ್ಲೆಯಲ್ಲಿ ಈ ಯೋಜನೆಯನ್ನು ಕಲ್ಪಿಸಲು ೨೦೧೬–೧೭ನೇ ಸಾಲಿಗೆ ಕಾಯ್ದಿರಿಸಲಾದ ಅನುದಾನ ಎಷ್ಟು ;

(ಉ) ಯಾವ ಕಾಲಮಿತಿಯಲ್ಲಿ ಈ ಸೌಲಭ್ಯವನ್ನು ರೈತರಿಗೆ ಒದಗಿಸಲಾಗುವುದು ?

## ಬೆಳಗಾವಿ ಜಿಲ್ಲೆಯ ಗಡಿ ತಾಲ್ಲೂಕುಗಳಲ್ಲಿ ಹಾಲು–ಉತ್ಪಾದಕರ ಸಹಕಾರ ಸಂಘಗಳು ಇಲ್ಲದೆ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೭೦೭ (೮೭೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬೆಳಗಾವಿ ಜಿಲ್ಲೆಯ ಗಡಿ ಭಾಗದಲ್ಲಿನ ತಾಲ್ಲೂಕುಗಳಲ್ಲಿ ಹಾಲು ಉತ್ಪಾದಕ ಸಹಕಾರಿ ಸಂಘಗಳು ಇಲ್ಲದಿರುವುದರಿಂದ, ಈ ಭಾಗದ ಬಹುಪಾಲು ಹಾಲು ನೆರೆಯ ಮಹಾರಾಷ್ಟ್ರ ರಾಜ್ಯಕ್ಕೆ ಹೋಗುತ್ತಿರುವ ವಿಚಾರ ಹಾಗೂ ಈ ರೈತರಿಗೆ ಸರ್ಕಾರವು ನೀಡುತ್ತಿರುವ ಹಾಲಿನ ಪ್ರೋತ್ಸಾಹಧನ ಸಿಗದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಆ ಭಾಗದಲ್ಲಿಯ ರೈತರು ಹಾಲು ಉತ್ಪಾದಕ ಸಹಕಾರಿ ಸಂಘಗಳನ್ನು ತೆರೆಯಲು, ಉತ್ಸಾಹ ತೋರದಿರಲು ಕಾರಣಗಳೇನು ; ಮಹಾರಾಷ್ಟ್ರ ಮತ್ತು ಕರ್ನಾಟಕ ರಾಜ್ಯಗಳಲ್ಲಿ ಇರುವ ಹಾಲಿನ ಬೆಲೆಯಲ್ಲಿ ವ್ಯತ್ಯಾಸವಿದೆಯೇ ; (ವಿವರ ನೀಡುವುದು)

(ಇ) ಜಿಲ್ಲೆಯ ಗಡಿ ಭಾಗದಲ್ಲಿ ಇರುವ ತಾಲ್ಲೂಕುಗಳಲ್ಲಿ ಎಷ್ಟು ಹಾಲು ಉತ್ಪಾದಕ ಸಹಕಾರ ಸಂಘಗಳಿವೆ ; ಅವು ಯಾವುವು ; (ಗ್ರಾಮವಾರು ವಿವರ ನೀಡುವುದು)

(ಈ) ಹಾಲು ಉತ್ಪಾದಕ ಸಹಕಾರ ಸಂಘಗಳು ಇಲ್ಲದಿರುವ ಯಾವ ಯಾವ ಕಡೆಗಳಲ್ಲಿ ಸದರಿ ಸಂಘಗಳನ್ನು ಸ್ಥಾಪಿಸಲು ಕ್ರಮ ಕೈಗೊಂಡು, ಸರ್ಕಾರದ ಪ್ರೋತ್ಸಾಹಧನ ರೈತರಿಗೆ ಸಿಗುವಂತೆ ಮಾಡಲಾಗುವುದು ?

## ರಾಜ್ಯದ ರೈತರ ಜಮೀನುಗಳಲ್ಲಿ ಮತ್ತು ಮೇಲ್ಛಾವಣಿಗಳ ಮೇಲೆ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡುವುದರ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೭೦೮ (೮೭೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸೋಲಾರ್‌ನಿಂದ ರೈತರ ಜಮೀನುಗಳಲ್ಲಿ ಮತ್ತು ಮೇಲ್ಛಾವಣಿಗಳ ಮೇಲೆ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆಯು ನಿರೀಕ್ಷಿತ ಮಟ್ಟದಲ್ಲಿ ಪ್ರಚಾರವಾಗಿ ರೈತರಿಗೆ ಇದರ ಉಪಯೋಗವಾಗದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸೋಲಾರ್‌ನಿಂದ ರೈತರ ಜಮೀನುಗಳಲ್ಲಿ ಮತ್ತು ಮೇಲ್ಛಾವಣಿಗಳ ಮೇಲೆ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆಯು ಯಾವಾಗಿನಿಂದ ಜಾರಿಗೆ ಬಂದಿದೆ; ಈ ಯೋಜನೆಯಲ್ಲಿ ರೈತರಿಗೆ ಸರ್ಕಾರವು ಯಾವ ಯಾವ ಸೌಲಭ್ಯಗಳನ್ನು ಒದಗಿಸುತ್ತದೆ; ಈ ಯೋಜನೆಯನ್ನು ವಿಸ್ತೃತವಾಗಿ ವಿವರಿಸುವುದು ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಜನ ರೈತರಿಗೆ ಈ ಯೋಜನೆಯ ಸೌಲಭ್ಯಗಳನ್ನು ಒದಗಿಸಲಾಗಿದೆ ; ಈವರೆಗೆ ಎಷ್ಟು ಪ್ರಮಾಣದ ವಿದ್ಯುತ್ ಉತ್ಪಾದಿಸಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ ವಿದ್ಯುತ್ ನಿರ್ವಹಣೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೭೦೯ (೮೬೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ಸರ್ಕಾರಿ ಸಂಸ್ಥೆಯಾದ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ ವಿದ್ಯುತ್ ನಿರ್ವಹಣೆ ಮಾಡಲು ಇಲಾಖೆಯು ವಿದ್ಯುತ್ ಪರಿವೀಕ್ಷಣಾಲಯದ ನಿಯಮದಂತೆ ಗೊತ್ತುಪಡಿಸಿರುವ ವಿದ್ಯಾರ್ಹತೆಯೇನು ;

(ಆ) ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ ಸರ್ಕಾರದ ವಿದ್ಯುತ್ ಪರಿವೀಕ್ಷಣಾಲಯದ ಇಲಾಖೆಯ ನಿಯಮದಂತೆ ಸಂಸ್ಥೆಯು ಉಪಯೋಗಿಸುವ ವಿದ್ಯುತ್ ಪ್ರಮಾಣದ ಅನುಗುಣವಾಗಿ ವಿದ್ಯುತ್ ನಿರ್ವಹಣೆ ಮಾಡಲು ಬೇಕಾದ ಸಿಬ್ಬಂದಿ ಸಂಖ್ಯೆ ಎಷ್ಟು; ಈ ಹುದ್ದೆಯ ಶ್ರೇಣಿಗಳು ಯಾವುವು ;

(ಇ) ಸರ್ಕಾರದ ವಿದ್ಯುತ್ ಪರಿವೀಕ್ಷಣಾಲಯದ ಅಧಿಕಾರಿಗಳು, ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ ವಾರ್ಷಿಕ ತಪಾಸಣೆ ನಡೆಸಿದ ಸಂದರ್ಭದಲ್ಲಿ ಅವರು ಪಡೆದ ವಿದ್ಯುತ್ ನಿರ್ವಹಣೆ ಹೊಣೆಗಾರಿಕೆ ಹೊಂದಿರುವ ಸಿಬ್ಬಂದಿಯ ವಿವರವನ್ನು ಒದಗಿಸುವುದು ;

(ಈ) ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ ಬಯೋ ಮೆಡಿಕಲ್ ಇಂಜಿನೀಯರಿಂಗ್ ಪದವಿಯ ವಿದ್ಯಾರ್ಹತೆಯನ್ನು ಪಡೆದ ವ್ಯಕ್ತಿಯು ವಿದ್ಯುತ್ ನಿರ್ವಹಣೆಯ ಕೆಲಸಗಳನ್ನು ಮಾಡಲು / ಮಾಡಿಸಲು ಅರ್ಹರಾಗಿರುವರೆ ?

## ಇಳಕಲ್ ನಗರದಲ್ಲಿ ಸ್ವಯಂ ಘೋಷಿತ ಆಸ್ತಿ ತೆರಿಗೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೭೧೦ (೮೬೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬಾಗಲಕೋಟೆ ಜಿಲ್ಲೆಯ ಇಳಕಲ್ ನಗರಸಭೆ ಸರ್ಕಾರದ ಮಾರ್ಗಸೂಚಿಗಳಿಗೆ ವ್ಯತಿರಿಕ್ತವಾಗಿ ಸ್ವಯಂ ಘೋಷಿತ ಆಸ್ತಿ ತೆರಿಗೆ ವಸೂಲಿ ಮಾಡುತ್ತಿರುವ ಕುರಿತ ದೂರುಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಈ ಕುರಿತ ದೂರುಗಳ ವಿವರಗಳ ಪ್ರತಿ, ದೂರುದಾರರಿಗೆ ನೀಡಿದ ಉತ್ತರಗಳು ಹಾಗೂ ಸರ್ಕಾರ ಕೈಗೊಂಡ ಕ್ರಮಗಳ ಸಮಗ್ರ ವಿವರಗಳನ್ನು ನೀಡುವುದು ;

ಆ) ಸ್ವಯಂ ಘೋಷಿತ ಆಸ್ತಿ ತೆರಿಗೆ ಪದ್ಧತಿ ನಿಯಮಾವಳಿಗಳ ಪ್ರಕಾರ ಇಳಕಲ್ ನಗರಸಭೆ ಪ್ರತಿ ಹಂತದ ತೆರಿಗೆ ಪರಿಷ್ಕರಣೆಯಲ್ಲಿ (೨೦೦೮–೦೯, ೨೦೧೧–೧೨ ಮತ್ತು ೨೦೧೪–೧೫) ನಿರ್ಧರಿಸಿದ ಠರಾವು/ ಗೊತ್ತುವಳಿಗಳ ವಿವರಗಳು ಮತ್ತು ವಿವಿಧ ಸಂಘಟನೆಗಳ ದೂರು, ಮನವಿಗಳನ್ನು ಆಧರಿಸಿ ಕೈಗೊಂಡ ನಿರ್ಣಯ/ಠರಾವುಗಳ ಸಮಗ್ರ ವಿವರಗಳನ್ನು ನೀಡುವುದು;

ಇ) ನಗರಸಭೆಯು ೨೦೦೮–೦೯ ಇಲ್ಲಿಯವರೆಗೂ ನಿಯಮಾವಳಿ ಉಲ್ಲಂಘಿಸಿ, ಹೆಚ್ಚುವರಿ ತೆರಿಗೆ ವಸೂಲಿ ಮಾಡಿದ್ದರೆ, ಅದನ್ನು ತೆರಿಗೆದಾರರಿಗೆ ಮರು ಪಾವತಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ನಿರ್ದಿಷ್ಟ ಕ್ರಮಗಳೇನು ; ಈ ಬಗ್ಗೆ ಸ್ಪಷ್ಟ ವಿವರಗಳನ್ನು ನೀಡುವುದು?

## ಸ್ಥಳೀಯ ಸಂಸ್ಥೆಗಳ ನಿರ್ವಹಣೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೭೧೧ (೮೬೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿನ ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಿಗೆ ಸಾಕಷ್ಟು ಅನುದಾನ ನೀಡುತ್ತಿದ್ದರೂ ಮೂಲ ಸೌಕರ್ಯಗಳ ನಿರ್ವಹಣೆಯಲ್ಲಿ ಅವು ವಿಫಲವಾಗುತ್ತಿವೆ ಎಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ರಾಜ್ಯದಲ್ಲಿನ ಸ್ಥಳೀಯ ಸಂಸ್ಥೆಗಳಿಗೆ (ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ) ೨೦೧೩-೧೪ ರಿಂದ ೨೦೧೬-೧೭ನೇ ಸಾಲಿಗೆ ರಾಜ್ಯ ಹಣಕಾಸು ಆಯೋಗ, ಮುಖ್ಯಮಂತ್ರಿಗಳ ವಿಶೇಷ ಪ್ಯಾಕೇಜ್/ ನಗರೋತ್ಥಾನ ಮತ್ತು ಕೇಂದ್ರ ಹಣಕಾಸು ಆಯೋಗದಿಂದ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು ಪ್ರತಿ ಸ್ಥಳೀಯ ಸಂಸ್ಥೆವಾರು, ವರ್ಷವಾರು ವಿವರಗಳನ್ನು ನೀಡುವುದು)

ಇ) ೨೦೧೩-೧೪ ರಿಂದ ೨೦೧೬ವರೆಗೆ ಬಿಡುಗಡೆಯಾದ ಅನುದಾನದಿಂದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳು ಕೈಗೊಂಡ ಎಲ್ಲಾ ಕಾಮಗಾರಿಗಳ ಸ್ಥಳೀಯ ಸಂಸ್ಥೆವಾರು, ಕಾಮಗಾರಿವಾರು ವಿವರ, ಕಾಮಗಾರಿವಾರು ನಿಗಧಿಪಡಿಸಿದ ಅಂದಾಜು ಮೊತ್ತ, ಖರ್ಚಾದ ಮೊತ್ತದ ಯೋಜನಾವಾರು, ಸ್ಥಳೀಯ ಸಂಸ್ಥೆವಾರು, ವಿವರಗಳನ್ನು ನೀಡುವುದು ;

ಈ) ಕೆಲವು ಸ್ಥಳೀಯ ಸಂಸ್ಥೆಗಳು ಅನುದಾನ ಬಳಸಿಕೊಳ್ಳದೇ ವಾಪಸ್ ಕಳುಹಿಸಲಾಗಿದೆಯೇ ; ಅಂತಹ ಸಂಸ್ಥೆಗಳ ಸಂಸ್ಥೆವಾರು, ಬಳಕೆಯಾಗದ ಶೀರ್ಷಿಕೆವಾರು ಹಣದ ವರ್ಷವಾರು ವಿವರಗಳನ್ನು ಸಮಗ್ರವಾಗಿ ನೀಡುವುದು ?

## ರಾಯಚೂರು ಜಿಲ್ಲಾ ವ್ಯಾಪ್ತಿಯಲ್ಲಿರುವ ಹಾಲು ಉತ್ಪಾದಕರ ಸಂಘಗಳ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೭೧೨ (೮೬೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲಾ ವ್ಯಾಪ್ತಿಯಲ್ಲಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳು ಎಷ್ಟು ; (ತಾಲ್ಲೂಕುವಾರು ಹೆಸರು, ವಿಳಾಸ ನೀಡುವುದು)

(ಆ) ರಾಯಚೂರು ಜಿಲ್ಲಾ ವ್ಯಾಪ್ತಿಯಲ್ಲಿರುವ ಪತ್ತಿನ ಸಹಕಾರ ಸಂಘಗಳು ಎಷ್ಟು ; (ಹೆಸರು, ವಿಳಾಸ ನೀಡುವುದು)

(ಇ) ರಾಯಚೂರು ಜಿಲ್ಲಾ ವ್ಯಾಪ್ತಿಯಲ್ಲಿರುವ ಮಹಿಳಾ ಸಹಕಾರ ಸಂಘಗಳು ಎಷ್ಟು ? (ತಾಲ್ಲೂಕುವಾರು ಹೆಸರು, ವಿಳಾಸ ಒದಗಿಸುವುದು)

## ವಿದ್ಯುತ್ ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೭೧೩ (೮೨೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿದ್ಯುತ್ ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ವಿದ್ಯುತ್ ಅಭಾವ ಪರಿಸ್ಥಿತಿಗೆ ಕಾರಣಗಳೇನು ; ಇದನ್ನು ಸರಿದೂಗಿಸುವ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ರಾಜ್ಯದ ವಿದ್ಯುತ್ ಉತ್ಪಾದನೆಯ ಸಾಮರ್ಥ್ಯವನ್ನು ಹೆಚ್ಚಿಸಲು ಇರುವ ತೊಂದರೆಗಳೇನು ;

(ಇ) ಯಾವ ಯಾವ ಮೂಲಗಳಿಂದ ವಿದ್ಯುತ್ ಉತ್ಪಾದನೆಗೆ ಸರ್ಕಾರ ಚಿಂತನೆ ನಡೆಸಿದೆ ; ಇಂತಹ ವಿದ್ಯುತ್ ಉತ್ಪಾದನೆ ಗುರಿ ಎಷ್ಟು ;

(ಈ) ಈ ಎಲ್ಲಾ ಮೂಲಗಳಿಂದ ಸಂಗ್ರಹಿಸಿರುವ ವಿದ್ಯುತ್ ಉತ್ಪಾದನೆಗೆ ತಗಲುವ ಖರ್ಚು ಎಷ್ಟು ?

## ಕುಂದಾಪುರ ಮೆಸ್ಕಾಂ ವಿಭಾಗೀಯ ಕಛೇರಿ ಮತ್ತು ಸೋಲಾರ್ ಘಟಕದ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೧೪ (೭೭೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉಡುಪಿ ಜಿಲ್ಲೆಯ ಕುಂದಾಪುರ ಮೆಸ್ಕಾಂ ವಿಭಾಗೀಯ ಕಛೇರಿಯು ಕಾರ್ಯನಿರ್ವಹಿಸುತ್ತಿರುವ ಕಟ್ಟಡದ ಮಾಸಿಕ ಬಾಡಿಗೆ ಎಷ್ಟು ; ಈವರೆಗೆ ಸರ್ಕಾರದಿಂದ ಸಂದಾಯ ಮಾಡಿದ ಬಾಡಿಗೆ ಮೊತ್ತವೆಷ್ಟು ; ಈ ಕಛೇರಿಗೆ ಸ್ಥಳ ಮತ್ತು ಕಟ್ಟಡ ಮಂಜೂರಾತಿಯಾಗಿದ್ದರು ಕಾಮಗಾರಿ ಪ್ರಾರಂಭಿಸದಿರಲು ಕಾರಣವೇನು ; ಯಾವಾಗ ಪ್ರಾರಂಭಿಸಲಾಗುವುದು ಮತ್ತು ಕಾಮಗಾರಿ ಪೂರ್ಣಗೊಳಿಸಲು ಇರುವ ಕಾಲಮಿತಿ ಯಾವುದು ; ಈ ವಿಳಂಬದಿಂದ ಸರ್ಕಾರಕ್ಕೆ ಆದ ಆರ್ಥಿಕ ನಷ್ಟಕ್ಕೆ ಯಾವ ಕ್ರಮ ಕೈಗೊಳ್ಳಲಾಗುವುದು ;

(ಆ) ರಾಜ್ಯದಲ್ಲಿರುವ ಖಾಸಗಿ ಸೋಲಾರ್ ವಿದ್ಯುತ್ ಉತ್ಪಾದಕ ಘಟಕಗಳ ಸಂಖ್ಯೆ ಎಷ್ಟು ; ಅವುಗಳಿಂದ ವಿದ್ಯುತ್ ನಿಗಮವು ವಿದ್ಯುತ್ ಖರೀದಿಸಲು ಪಾವತಿಸುತ್ತಿರುವ ದರವೆಷ್ಟು ; ಎಷ್ಟು ಘಟಕಗಳಿಂದ ವಿದ್ಯುತ್ತನ್ನು ಖರೀದಿಸಲಗುತ್ತಿದೆ ; ವಿದ್ಯುತ್ ಖರೀದಿಯ ಪ್ರಮಾಣವೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ರಾಜ್ಯದಲ್ಲಿ ಹೆಚ್ಚು ಸೋಲಾರ್ ವಿದ್ಯುತ್ ಉತ್ಪಾದಿಸಲು ಸರ್ಕಾರದಿಂದ ಖಾಸಗಿ ಘಟಕಗಳಿಗೆ ನೀಡುವ ಸವಲತ್ತುಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಕುಂದಾಪುರ ಪುರಸಭೆಯಿಂದ ವಿತರಿಸಲಾದ ನಿವೇಶನಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೧೫ (೭೭೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಉಡುಪಿ ಜಿಲ್ಲೆಯ ಕುಂದಾಪುರ ಪುರಸಭೆ ವ್ಯಾಪ್ತಿಯಲ್ಲಿ ವಿತರಿಸಲಾದ ನಿವೇಶನಗಳ ಸಂಖ್ಯೆ ಎಷ್ಟು ; (ವರ್ಷಾವಾರು ವಿವರ ನೀಡುವುದು)

(ಆ) ಪುರಸಭಾ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಪೌರ ಕಾರ್ಮಿಕರಿಗೆ ವಿತರಿಸಲಾದ ನಿವೇಶನಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ ಪೌರ ಕಾರ್ಮಿಕರ ಸಂಖ್ಯೆ ಎಷ್ಟು ;

(ಇ) ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಪುರಸಭೆಯಿಂದ ನಿವೇಶನವನ್ನು ಖರೀದಿಸಿ ವಿತರಿಸಲಾಗಿದೆಯೇ ; ಇಲ್ಲವಾದಲ್ಲಿ, ಯಾವ ಮೂಲದಿಂದ ವಿತರಿಸಲಾಗಿದೆ ?

## KRDCL ನಿಂದ ನಿರ್ವಹಿಸುತ್ತಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೧೬ (೭೭೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ KRDCL ನಿಂದ ಮಂಜೂರಾತಿಯಾಗಿ ಕಾರ್ಯನಿರ್ವಹಿಸುತ್ತಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ವರ್ಷಾವಾರು ವಿವರ ನೀಡುವುದು) ಅವುಗಳಲ್ಲಿ ಪೂರ್ಣಗೊಂಡ ಮತ್ತು ಅಪೂರ್ಣವಾಗಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಇಲ್ಲಿಯವರೆಗೆ ವೆಚ್ಚವಾದ ಅನುದಾನವೆಷ್ಟು ; (ತಾಲ್ಲೂಕುವಾರು, ವರ್ಷಾವಾರು ವಿವರ ನೀಡುವುದು)

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ KRDCL ನಿಂದ ಕೈಗೊಂಡ ಕಾಮಗಾರಿಗಳು ಯಾವುವು ; ಅವುಗಳಲ್ಲಿ ಪೂರ್ಣಗೊಂಡ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗೆ ಬಳಕೆಯಾದ ಅನುದಾನವೆಷ್ಟು ; ಅಪೂರ್ಣಗೊಂಡ ಕಾಮಗಾರಿ ಪೂರ್ಣಗೊಳಿಸಲು ಇರುವ ಕಾಲಮಿತಿ ಯಾವುದು ?

## ತೋಟಗಾರಿಕಾ ಇಲಾಖೆ ಮತ್ತು ತೋಟಗಾರಿಕಾ ವಿಶ್ವ ವಿದ್ಯಾನಿಲಯಗಳ ಅಧೀನದ ಕೃಷಿ ಭೂಮಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೧೭ (೭೭೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ತೋಟಗಾರಿಕೆ ಇಲಾಖೆಯ ಸ್ವಾಧೀನದಲ್ಲಿರುವ ಜಮೀನಿನ ವಿಸ್ತೀರ್ಣ ಎಷ್ಟು ; ಅದರಲ್ಲಿ ಇಲಾಖೆಯಿಂದ ನಿಗಧಿತ ಉದ್ದೇಶಕ್ಕೆ ಸದ್ಬಳಕೆಯಾದ ಜಮೀನಿನ ವಿಸ್ತೀರ್ಣ ಎಷ್ಟು ; (ತಾಲ್ಲೂಕುವಾರು, ಹೆಕ್ಟೇರ್‌ವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ತೋಟಗಾರಿಕೆ ವಿಶ್ವ ವಿದ್ಯಾನಿಲಯಗಳ ಸ್ವಾಧೀನತೆಯಲ್ಲಿರುವ ಭೂಮಿಯ ವಿಸ್ತೀರ್ಣ ಎಷ್ಟು ; ಅವುಗಳಲ್ಲಿ ನಿಗಧಿತ ಉದ್ದೇಶಕ್ಕೆ ಸದ್ಬಳಕೆಯಾದ ಭೂಮಿಯ ವಿಸ್ತೀರ್ಣ ಎಷ್ಟು ; (ವಿಶ್ವ ವಿದ್ಯಾನಿಲಯ, ತಾಲ್ಲೂಕು, ಎಕರೆವಾರು ವಿವರ ಒದಗಿಸುವುದು)

(ಇ) ತೋಟಗಾರಿಕೆ ವಿಶ್ವ ವಿದ್ಯಾನಿಲಯಗಳ ಜಮೀನನ್ನು ನಿಗಧಿತ ಉದ್ದೇಶಕ್ಕೆ ಸದ್ಬಳಕೆ ಮಾಡದಿರುವುದರಿಂದ ಇಲಾಖೆಯ ಆಡಳಿತದ ಮೇಲೆ ದುಷ್ಪರಿಣಾಮ ಬೀರುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ; ಈ ಬಗ್ಗೆ ಸರ್ಕಾರದ ಕ್ರಮವೇನು?

## ಕೃಷಿ ಇಲಾಖೆ ಮತ್ತು ಕೃಷಿ ವಿಶ್ವ ವಿದ್ಯಾನಿಲಯಗಳ ಅಧೀನದ ಕೃಷಿ ಭೂಮಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೧೮ (೭೭೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕೃಷಿ ಇಲಾಖೆಯ ಸ್ವಾಧೀನದಲ್ಲಿರುವ ಜಮೀನಿನ ವಿಸ್ತೀರ್ಣ ಎಷ್ಟು; ಅದರಲ್ಲಿ ಇಲಾಖೆಯಿಂದ ನಿಗಧಿತ ಉದ್ದೇಶಕ್ಕೆ ಸದ್ಬಳಕೆಯಾದ ಜಮೀನಿನ ವಿಸ್ತೀರ್ಣ ಎಷ್ಟು ; (ತಾಲ್ಲೂಕುವಾರು, ಹೆಕ್ಟೇರ್‌ವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕೃಷಿ ವಿಶ್ವ ವಿದ್ಯಾನಿಲಯಗಳ ಸ್ವಾಧೀನತೆಯಲ್ಲಿರುವ ಭೂಮಿಯ ವಿಸ್ತೀರ್ಣ ಎಷ್ಟು ; ಅವುಗಳಲ್ಲಿ ನಿಗಧಿತ ಉದ್ದೇಶಕ್ಕೆ ಸದ್ಬಳಕೆಯಾದ ಭೂಮಿಯ ವಿಸ್ತೀರ್ಣ ಎಷ್ಟು ; (ವಿಶ್ವ ವಿದ್ಯಾನಿಲಯ, ತಾಲ್ಲೂಕು, ಎಕರೆವಾರು ವಿವರ ಒದಗಿಸುವುದು)

(ಇ) ಕೃಷಿ ವಿಶ್ವ ವಿದ್ಯಾನಿಲಯಗಳ ಜಮೀನನ್ನು ನಿಗಧಿತ ಉದ್ದೇಶಕ್ಕೆ ಸದ್ಬಳಿಕೆ ಮಾಡದಿರುವುದರಿಂದ ಇಲಾಖೆಯ ಆಡಳಿತದ ಮೇಲೆ ದುಷ್ಪರಿಣಾಮ ಬೀರುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ; ಈ ಬಗ್ಗೆ ಸರ್ಕಾರದ ಕ್ರಮವೇನು ?

## ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೧೯ (೭೮೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪುರಸಭೆಗಳು ಮತ್ತು ಸ್ಥಳೀಯ ಸಂಸ್ಥೆಗಳಿಗೆ ಅನುಷ್ಠಾನಗೊಳ್ಳುತ್ತಿರುವ ಯೋಜನೆವಾರು ಕಾರ್ಯಕ್ರಮಗಳು ಯಾವುವು ;

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಿಗೆ ೨೦೧೫–೧೬ನೇ ಸಾಲಿನಲ್ಲಿ ನಗರೋತ್ಥಾನ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಇ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಿಗೆ ೨೦೧೫–೧೬ನೇ ಈ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; ಅನುಮೋದಿತ ಕಾಮಗಾರಿಗಳು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಈ ಕಾಮಗಾರಿಗಳು ಹಾಲಿ ಯಾವ ಹಂತದಲ್ಲಿವೆ ? (ಕಾಮಗಾರಿವಾರು ಪೂರ್ಣ ಮಾಹಿತಿ ಒದಗಿಸುವುದು)

## ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೨೦ (೭೮೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ತೋಟಗಾರಿಕೆ ಇಲಾಖೆಯ ಕೇಂದ್ರ ವಲಯ ಯೋಜನೆಯಲ್ಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್, ಸಾವಯವ ಕೃಷಿ, ಯಾಂತ್ರೀಕರಣ ಯೋಜನೆ ಹಾಗೂ ರಾಜ್ಯ ವಲಯದ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯ ಕಾರ್ಯಕ್ರಮಗಳಿಗೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ ಸಹಾಯಧನ ಎಷ್ಟು ; ಖರ್ಚಾದ ಹಣ ಎಷ್ಟು ; (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಮೇಲ್ಕಂಡ ಕೇಂದ್ರ ವಲಯ ಹಾಗೂ ರಾಜ್ಯ ವಲಯ ಯೋಜನೆಗಳ ಕಾರ್ಯಕ್ರಮಗಳ ಅನುಕೂಲ ಪಡೆದ ಶೇಕಡವಾರು ಸಾಮಾನ್ಯ ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡ ಫಲಾನುಭವಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೨೧ (೭೯೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಇಂಧನ ಇಲಾಖೆ ವತಿಯಿಂದ ಅನುಷ್ಠಾನಗೊಳ್ಳುತ್ತಿರುವ ಯೋಜನೆವಾರು ಕಾರ್ಯಕ್ರಮಗಳು ಯಾವುವು ;

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಿಗೆ ಕಳೆದ ಮೂರು ವರ್ಷಗಳಿಂದ ಈ ಯೋಜನೆಗಳ ಅನುಷ್ಠಾನದಲ್ಲಿ ಎಷ್ಟು ಸಹಾಯಧನವನ್ನು (ಶೇಕಡವಾರು) ಮಂಜೂರು ಮಾಡಲಾಗಿದೆ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೨೨ (೭೮೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪಶುಸಂಗೋಪನೆ ಇಲಾಖಾ ವತಿಯಿಂದ ಅನುಷ್ಠಾನಗೊಳ್ಳುತ್ತಿರುವ ಯೋಜನೆವಾರು ಕಾರ್ಯಕ್ರಮಗಳು ಯಾವುವು ;

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಿಗೆ ಕಳೆದ ಮೂರು ವರ್ಷಗಳಿಂದ ಈ ಯೋಜನೆಗಳ ಅನುಷ್ಠಾನದಲ್ಲಿ ಎಷ್ಟು ಸಹಾಯಧನವನ್ನು (ಶೇಕಡಾವಾರು) ಮಂಜೂರು ಮಾಡಲಾಗಿದೆ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುರ್ದು)

## ಪಶುಭಾಗ್ಯ ಯೋಜನೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೨೩ (೮೭೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಮೃತ ಪಡುತ್ತಿರುವ ರೈತರ ಕುಟುಂಬಕ್ಕೆ ಸ್ವಾವಲಂಭಿ ಜೀವನ ನಡೆಸಲು "ಪಶು ಭಾಗ್ಯ" ಯೋಜನೆಯನ್ನು ಜಾರಿಗೆ ತರುವುದಾಗಿ ಘೋಷಿಸಿರುವುದು ನಿಜವೇ ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಮೃತ ರೈತರ ಕುಟುಂಬಕ್ಕೆ ಸ್ವಾವಲಂಭಿ ಜೀವನ ಸಾಗಿಸಲು ಈ ಯೋಜನೆಯಲ್ಲಿ ಏನೆಲ್ಲಾ ಅನುಕೂಲಗಳನ್ನು ಒದಗಿಸಲಾಗುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಇರುವ ಮಾನದಂಡಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಚಿಕ್ಕಮಗಳೂರು ಜಿಲ್ಲೆಗೆ ಈ ಯೋಜನೆಯಡಿ ಎಷ್ಟು ಅನುದಾನ ಮೀಸಲಿಡಲಾಗಿದೆ; ನಕ್ಸಲ್ ಪೀಡಿತ ಪ್ರದೇಶದವರಿಗೆ ವಿಶೇಷ ಯೋಜನೆಯನ್ನು ಜಾರಿಗೆ ತರುವ ವಿಚಾರ ಸರ್ಕಾರದ ಮುಂದೆ ಇದೆಯೇ ? (ಮಾಹಿತಿ ನೀಡುವುದು)

## ಅಡಿಕೆ ಬೆಳೆಗಾರರ ಸಮಸ್ಯೆ ಹಾಗೂ ಪ್ರತ್ಯೇಕ ಅಡಿಕೆ ಮಂಡಳಿ ರಚನೆ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೭೨೪ (೭೯೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅಡಿಕೆ ಬೆಳೆಯನ್ನು ಎಲ್ಲೆಲ್ಲಿ ಬೆಳೆಯಲಾಗುತ್ತದೆ ; ಈ ಬೆಳೆ ಕುರಿತು ಸಂಕ್ಷಿಪ್ತವಾಗಿ ವಿವರಿಸುವುದು ;

(ಆ) ಅಡಿಕೆ ಬೆಳೆಗಾರರ ಸಮಸ್ಯೆಗಳನ್ನು ಕುರಿತು ವಿವರಿಸುವುದು ;

(ಇ) ತೋಟಗಾರಿಕೆ ವಿಜ್ಞಾನಗಳ ವಿಶ್ವ ವಿದ್ಯಾಲಯದಿಂದ ಈ ಸಂಬಂಧ ಅಧ್ಯಯನ ನಡೆಸಿರುವುದು ನಿಜವೇ ; ನಿಜವಾಗಿದ್ದಲ್ಲಿ, ವರದಿ ಪ್ರಮುಖ ಅಂಶಗಳ ಕುರಿತು ವಿವರಿಸುವುದು ;

(ಈ) ಸದರಿ ವರದಿಯಲ್ಲಿ ಪ್ರತ್ಯೇಕ ಅಡಿಕೆ ಮಂಡಳಿ ರಚನೆಗೆ ಶಿಫಾರಸ್ಸು ಮಾಡಿರುವುದು ನಿಜವೇ ;

(ಉ) ಈ ಕುರಿತು ಸರ್ಕಾರದ ನಿಲುವೇನು ?

## ವಿಜಯಪುರ ನಗರದ ಬಸ್‌ನಿಲ್ದಾಣದ ಬಳಿ ಗಾಂಧಿ ಚೌಕ ರಸ್ತೆ ದುರಸ್ಥಿ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೭೨೫ (೯೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಜಯಪುರ ನಗರದ ಬಸ್ ನಿಲ್ದಾಣದ ಎದುರಿನ ಮುಖ್ಯ ರಸ್ತೆ, ಗಾಂಧಿ ಚೌಕ ಮತ್ತು ಬಸವೇಶ್ವರ ವೃತ್ತದ ಕೂಡು ರಸ್ತೆಗಳು ಹಾಳಾಗಿದ್ದು, ರಸ್ತೆಗಳಲ್ಲಿ ಅನೇಕ ಗುಂಡಿಗಳು ಉಂಟಾಗಿ ವಾಹನ ಚಾಲನೆಗೆ ಯೋಗ್ಯವಾಗಿಲ್ಲವೆನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ರಸ್ತೆಗಳ ದುರಸ್ಥಿಗೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಇ) ಈ ರಸ್ತೆಗಳ ದುರಸ್ಥಿಯನ್ನು ಪ್ರಥಮ ಆದ್ಯತೆಯಲ್ಲಿ ಕೈಗೆತ್ತಿಕೊಂಡು ಅಭಿವೃದ್ಧಿ ಪಡಿಸಲಾಗುವುದೇ ; ಈ ರಸ್ತೆಗಳ ದುರಸ್ಥಿಗೆ ಬೇಕಾಗುವ ಕಾಲಾವಧಿ ಏನು?

## ಬಾಗೇಪಲ್ಲಿ ಪುರಸಭೆ ವ್ಯಾಪ್ತಿಯಲ್ಲಿ ಶವ ಸಾಗಣೆ ವಾಹನದ ಕೊರತೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೭೨೬ (೯೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಪುರಸಭೆ ವ್ಯಾಪ್ತಿಯಲ್ಲಿ ಶವ ಸಾಗಣೆ ವಾಹನದ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಸಂಬಂಧ ನಿರ್ಗತಿಕರಿಗೆ, ಬಡವರಿಗೆ ಶವ ಸಾಗಣೆ ವಾಹನವನ್ನು ಸಂಸ್ಕಾರ ಮಾಡುವ ಸಂದರ್ಭದಲ್ಲಿ ಪುರಸಭೆಯಿಂದ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)

## ಕುಲಾಂತರಿ ತಳಿಗಳು ಹಾಗೂ ಕುಲಾಂತರಿ ಸಾಸಿವೆ ಬೆಳೆಯಿಂದ ದುಷ್ಪರಿಣಾಮ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೭೨೭ (೯೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೃಷಿಯಲ್ಲಿ ಕುಲಾಂತರಿ ತಳಿಗಳು ಪರಿಚಯವಾಗುತ್ತಿರುವುದು ನಿಜವೇ ; ನಿಜವಾಗಿದ್ದಲ್ಲಿ, ಯಾವ ಯಾವ ಕುಲಾಂತರಿ ಬೆಳೆಗಳಿವೆ ; (ವಿವರಣೆ ನೀಡುವುದು)

(ಆ) ಕುಲಾಂತರಿ ತಳಿಗಳಿಂದ ಯಾವ ರೀತಿಯ ಅನಾನುಕೂಲಗಳಿವೆ ; (ವಿವರಣೆ ನೀಡುವುದು)

(ಇ) ಕುಲಾಂತರಿ ಸಾಸಿವೆ ತಳಿ ಬೆಳೆಯುವಂತೆ ರೈತರನ್ನು ಪ್ರೋತ್ಸಾಹಿಸುತ್ತಿರುವುದು ನಿಜವೇ ; ಇದರಿಂದಾಗಿ ಕೃಷಿ ಕ್ಷೇತ್ರದಲ್ಲಿ ಉಂಟಾಗಬಹುದಾದ ಅನಾಹುತ ಅಥವಾ ತೊಂದರೆಗಳೇನು ;

(ಈ) ಇದನ್ನು ತಡೆಗಟ್ಟುವ ವಿಚಾರದಲ್ಲಿ ಸರ್ಕಾರದ ನಿಲುವೇನು ; ಅದಕ್ಕಾಗಿ ಏನು ಕ್ರಮ ಕೈಗೊಳ್ಳಲಾಗಿದೆ ?

## ಮಾಗಡಿಯ ಕೃಷಿ ಉತ್ಪನ್ನ ಮಾರುಕಟ್ಟೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೭೨೮ (೮೦೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಾಗಡಿ ತಾಲ್ಲೂಕಿನಲ್ಲಿ ರೈತರು ಬೆಳೆದ ತರಕಾರಿಗಳನ್ನು ಮಾರಾಟ ಮಾಡಲು ಯಾವ ರೀತಿಯ ಕೃಷಿ ಉತ್ಪನ್ನ ಮಾಡುಕಟ್ಟೆಯನ್ನು ಕಲ್ಪಿಸಲಾಗಿದೆ ;

(ಆ) ಪ್ರಸ್ತುತ ಮಾರಾಟ ಮಾಡುತ್ತಿರುವ ಸ್ಥಳವು ಕಸದ ರಾಶಿಯಿಂದ ತುಂಬಿ ದುರ್ನಾತವನ್ನು ಹೊರ ಸೂಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಸಂಬಂಧ ತರಕಾರಿಗಳನ್ನು ರೈತರು ಮಾರಿದ ನಂತರ ಅದರ ತ್ಯಾಜ್ಯವನ್ನು ತೆಗೆಯಲು ಸಿಬ್ಬಂದಿಯನ್ನು ನೇಮಿಸಲಾಗಿದೆಯೇ ;

(ಈ) ಇಲ್ಲವಾದಲ್ಲಿ, ತಕ್ಷಣಕ್ಕೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ಸೋಲಾರ್ ಪವರ್ ಉತ್ಪಾದಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೭೨೯ (೮೦೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದರಾಬಾದ್–ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳಲ್ಲಿ ಎಷ್ಟು ಸೋಲಾರ್ ಪವರ್ ಉತ್ಪಾದನಾ ಘಟಕಗಳು ಇವೆ ; (ತಾಲ್ಲೂಕುವಾರು, ವಿಳಾಸವಾರು ವಿವರ ನೀಡುವುದು)

(ಆ) ಈ ಸೋಲಾರ್ ಪವರ್ ಉತ್ಪಾದನಾ ಘಟಕಗಳ ಸ್ಥಾಪನೆಗೆ ಇರುವ ಮಾನದಂಡವೇನು ; ಇದಕ್ಕೆ ಸರ್ಕಾರ ಅಧಿಸೂಚನೆ ಹೊರಡಿಸಿದೆಯೇ ; (ಪ್ರತಿಯೊಂದಿಗೆ ಪೂರ್ಣ ವಿವರ ನೀಡುವುದು)

(ಇ) ಈ ಜಿಲ್ಲೆಗಳ ವ್ಯಾಪ್ತಿಯಲ್ಲಿ ಪ್ರತಿ ತಾಲ್ಲೂಕಿಗೆ ಬೇಕಾಗುವ ವಿದ್ಯುತ್‌ನ್ನು ಅದೇ ತಾಲ್ಲೂಕಿನಲ್ಲಿ ಸೋಲಾರ್ ಪವರ್ ಉತ್ಪಾದಿಸುವ ಯೋಜನೆ ಜಾರಿಯಲ್ಲಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ಜಿಲ್ಲೆಗಳಲ್ಲಿ ಖಾಸಗಿಯಾಗಿ ಸೋಲಾರ್ ಪವರ್ ಉತ್ಪಾದನೆ ಮಾಡಿ, ಸರ್ಕಾರಕ್ಕೆ ಮಾರಾಟ ಮಾಡುತ್ತಿರುವವರು ಎಷ್ಟು ; ಇದರ ದರವೆಷ್ಟು ? (ತಾಲ್ಲೂಕುವಾರು, ಉತ್ಪಾದಕರ ವಿಳಾಸವಾರು ಸಂಪೂರ್ಣ ವಿವರ ನೀಡುವುದು)

## ರೈತರಿಗೆ ಬೆಂಬಲ ಬೆಲೆ ನೀಡುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೭೩೦ (೮೦೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರೈತರಿಗೆ ಬೆಂಬಲ ಬೆಲೆ ನೀಡಲಾಗಿಲ್ಲವೆಂದು ಕಳೆದ ಒಂದು ವರ್ಷದಲ್ಲಿ ಎಷ್ಟು ಸಕ್ಕರೆ ದಾಸ್ತಾನುಗಳ ಮೇಲೆ ದಾಳಿ ನಡೆಸಲಾಗಿದೆ ; ದಾಳಿಗೊಳಪಟ್ಟ ದಾಸ್ತಾನುಗಳ ಸಂಪೂರ್ಣ ವಿವರ ನೀಡುವುದು ;

(ಆ) ಈ ದಾಳಿಯಲ್ಲಿ ಜಪ್ತಿ ಮಾಡಲಾಗಿರುವ ಸಕ್ಕರೆಯ ಒಟ್ಟು ಪ್ರಮಾಣವೆಷ್ಟು ; ಇವುಗಳನ್ನು ಯಾವ ಜಾಗದಲ್ಲಿ ಸಂರಕ್ಷಣೆ ಮಾಡಲಾಗಿದೆ ; ಹಾಗೂ ಇದರ ಸಂರಕ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಇವುಗಳನ್ನು ಸಾರ್ವಜನಿಕರಿಗೆ ವಿತರಣೆ ಮಾಡಲು ಕೈಗೊಂಡ ಕ್ರಮಗಳೇನು; ಈ ವಿತರಣೆಯನ್ನು ಯಾವ ರೀತಿಯಲ್ಲಿ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಈ ವಿತರಣೆ ಪ್ರಕ್ರಿಯೆಯಲ್ಲಿ ಯಾರೆಲ್ಲಾ ಭಾಗವಹಿಸಿದ್ದರು ; ಈ ಪ್ರಕ್ರಿಯೆಯು ಹಾಲಿ ಯಾವ ಹಂತದಲ್ಲಿದೆ ; (ಪೂರ್ಣ ವಿವರ ನೀಡುವುದು)

(ಉ) ಈ ಸಕ್ಕರೆ ವಿತರಣೆಯಾಗಿಲ್ಲದಿದ್ದಲ್ಲಿ, ಈವರೆಗೆ ಹಾಳಾದ ಸಕ್ಕರೆಯ ಪ್ರಮಾಣವೆಷ್ಟು?

## ಪೌರಾಡಳಿತ ಇಲಾಖೆಯಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೭೩೧ (೮೮೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪೌರಾಡಳಿತ ಇಲಾಖೆಯಲ್ಲಿ ಯೋಜನಾ ನಿರ್ದೇಶಕರು, ಪೌರಾಯುಕ್ತರು, ಮುಖ್ಯಾಧಿಕಾರಿಗಳು ಹಾಗೂ ಇನ್ನಿತರೆ ವೃಂದದಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಬೇರೆ ಇಲಾಖೆಯ ಅಧಿಕಾರಿ/ನೌಕರರುಗಳೆಷ್ಟು ; ಹಾಗೆ ಆಯಾಯ ಅಧಿಕಾರಿ/ನೌಕರರು ಯಾವ ಯಾವ ಇಲಾಖೆಯವರು ಮತ್ತು ಎಷ್ಟು ಅವಧಿಯಿಂದ ಕಾರ್ಯನಿರ್ವಹಿಸುತ್ತಿದ್ದಾರೆ ; ಅಂತಹ ಅಧಿಕಾರಿಗಳನ್ನು ಅವರ ಮಾತೃ ಇಲಾಖೆಗೆ ವಾಪಸ್ ಕಳುಹಿಸದೇ ಮುಂದುವರೆಸಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಐದು ವರ್ಷಗಳಿಗೂ ಮೀರಿ ನಿಯೋಜನೆ ಮೇಲೆ ಮುಂದುವರೆಸಲು ನಿಯಮಗಳಲ್ಲಿ ಅವಕಾಶ ಇದೆಯೇ ; ಇಲ್ಲದಿದ್ದಲ್ಲಿ, ೫ ವರ್ಷಗಳಿಗೂ ಮೀರಿ ಮುಂದುವರೆಸಲು ಕಾರಣಗಳೇನು ; ಅನ್ಯ ಇಲಾಖೆಯಿಂದ ನಿಯೋಜನೆ ಮೇಲೆ ಬಂದು ಅಧಿಕಾರ ದುರುಪಯೋಗ, ಅವ್ಯವಹಾರದಲ್ಲಿ ಭಾಗಿಯಾದ ಅಧಿಕಾರಿ/ನೌಕರರ ಪದನಾಮದೊಂದಿಗೆ ವಿವರ ನೀಡುವುದು ?

## ವಿವಿಧ ಯೋಜನೆಗಳ ಅಡಿಯಲ್ಲಿ ಬಿಡುಗಡೆಯಾದ ಅನುದಾನವೆಷ್ಟು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೭೩೨ (೮೦೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೃಷಿ ಮಾರುಕಟ್ಟೆ ಇಲಾಖೆಯಿಂದ ವಿವಿಧ ಯೋಜನೆಗಳಡಿಯಲ್ಲಿ ಬಿಡುಗಡೆಯಾದ ಹಣ ಎಷ್ಟು ; ಖರ್ಚು ಮಾಡಲಾದ ಹಣ ಎಷ್ಟು ; (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಆ) ಈ ಜಿಲ್ಲೆಗಳಲ್ಲಿ ಯಾವ ಯಾವ ಕಾಮಗಾರಿಗಳಿಗೆ ಹಣ ಬಿಡುಗಡೆ ಮಾಡಲಾಗಿದೆ ; ಬಿಡುಗಡೆ ಮಾಡಿದ ಮೊತ್ತ ಎಷ್ಟು ; ಯಾವ ಉದ್ದೇಶಗಳಿಗಾಗಿ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ಅನುದಾನ ಸಮಯಕ್ಕೆ ಸರಿಯಾಗಿ ಖರ್ಚಾಗದೆ ಸರ್ಕಾರಕ್ಕೆ ವಾಪಸ್ಸು ಮಾಡಲಾಗಿದೆಯೇ; ಅಥವಾ ಉಳಿಕೆ ಅನುದಾನವನ್ನು ಮುಂದಿನ ವರ್ಷಕ್ಕೆ ಬಳಕೆ ಮಾಡಲು ಅವಕಾಶವಿದೆಯೇ ; ಈ ರೀತಿ ಯಾವಾಗ, ಎಷ್ಟು ಅನುದಾನ ಬಳಕೆಯಾಗಿದೆ? (ಪೂರ್ಣ ವಿವರ ನೀಡುವುದು)

## ಸಹಕಾರ ಸಂಘಗಳಲ್ಲಿ ನಡೆದಿರುವ ಅವ್ಯವಹಾರದ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೭೩೩ (೮೦೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳಲ್ಲಿ ಎಷ್ಟು ಹಾಗೂ ಯಾವ ಯಾವ ಸಹಕಾರ ಸಂಘಗಳು ಇವೆ ; (ತಾಲ್ಲೂಕುವಾರು, ವಿಳಾಸವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಎಷ್ಟು ಹೊಸ ಪತ್ತಿನ ಸಹಕಾರ ಸಂಘಗಳು ಪ್ರಾರಂಭವಾಗಿವೆ ; (ತಾಲ್ಲೂಕುವಾರು, ವಿಳಾಸವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಜಿಲ್ಲೆಗಳ ವ್ಯಾಪ್ತಿಯ ವಿವಿಧ ಸಹಕಾರ ಸಂಘಗಳಲ್ಲಿ ನಡೆದಿರುವ ಅವ್ಯವಹಾರಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅವುಗಳು ಯಾವುವು ; ಅವುಗಳ ವಿರುದ್ಧ ಯಾವ ಯಾವ ನಿಯಮಗಳಡಿಯಲ್ಲಿ ತನಿಖೆ ಕೈಗೊಳ್ಳಲಾಗಿದೆ ; ಪ್ರಸ್ತುತ ತನಿಖೆಯ ಪ್ರಗತಿ ಯಾವ ಹಂತದಲ್ಲಿವೆ ; ತನಿಖೆಯಿಂದ ಈವರೆಗೆ ಪತ್ತೆಯಾದ ಅವ್ಯವಹಾರಗಳ ಪ್ರಕರಣ ಮತ್ತು ಪ್ರಮಾಣ ಎಷ್ಟು ? (ತಾಲ್ಲೂಕುವಾರು, ವಿಳಾಸವಾರು ವಿವರ ನೀಡುವುದು)

## ಸಿ.ಎ. ಸೈಟ್‌ಗಳ ಲೇಔಟ್

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೭೩೪ (೭೮೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾವೇರಿ ಜಿಲ್ಲೆಯಲ್ಲಿರುವ ಪಟ್ಟಣ ಪಂಚಾಯತಿ, ಪುರಸಭೆ, ನಗರಸಭೆವಾರು ಖಾಲಿ ಇರುವ ಸಿ.ಎ. ಸೈಟ್‌ಗಳ/ಲೇಔಟ್‌ಗಳ ಸಂಖ್ಯೆ ಎಷ್ಟು ; (ಲೇಔಟ್‌ವಾರು ವಿವರ ನೀಡುವುದು)

(ಆ) ಯಾವ ಉದ್ದೇಶಕ್ಕಾಗಿ ಇವುಗಳನ್ನು ಹಂಚಿಕೆ ಮಾಡದೆ ಕಾಯ್ದಿರಿಸಲಾಗಿದೆ ;

(ಇ) ಹಾವೇರಿ ಜಿಲ್ಲೆಯ ಶಿಗ್ಗಾಂವ, ಬಂಕಾಪುರ, ಸವಣೂರು ಪುರಸಭೆಯಲ್ಲಿ ಕಳೆದ ಮೂರು ವರ್ಷದಲ್ಲಿ ಯಾವ ಯಾವ ಯೋಜನೆಯಡಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ? (ಪ್ರತಿ ವಾರ್ಡ್‌ವಾರು ವಿವರ ನೀಡುವುದು)

## ಗ್ರಾಮ ಪಂಚಾಯತಿ, ಪಟ್ಟಣ ಪಂಚಾಯತಿ, ಪುರಸಭೆಗಳ ಮುಖ್ಯ ರಸ್ತೆ ಅಗಲೀಕರಣದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೭೩೫ (೭೮೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಹೆದ್ದಾರಿ ಮಾಡುವಾಗ ಗ್ರಾಮ ಪಂಚಾಯತಿ, ಪಟ್ಟಣ ಪಂಚಾಯತಿ ಮತ್ತು ಪುರಸಭೆ, ನಗರಸಭೆಗಳಿದ್ದ ಊರುಗಳಿಗೆ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ; (ರಸ್ತೆ ಅಗಲೀಕರಣದ ಅಳತೆ ಬಗ್ಗೆ ವಿವರ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಕಿ.ಮೀ. ಉದ್ದದಲ್ಲಿ ರಾಷ್ಟ್ರೀಯ, ರಾಜ್ಯ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳು ಅಸ್ತಿತ್ವದಲ್ಲಿದೆ ;

(ಇ) ಯಾವ ಯಾವ ತಾಲ್ಲೂಕುಗಳಲ್ಲಿ ಅಂತಹ ರಸ್ತೆಗಳು ಹಾದು ಹೋಗಿವೆ ; (ರಸ್ತೆವಾರು ಮಾಹಿತಿ ನೀಡುವುದು)

(ಈ) ಈ ರಸ್ತೆಗಳ ಅಭಿವೃದ್ಧಿಗೆ ತೆಗೆದುಕೊಂಡಿರುವ ಕ್ರಮಗಳೇನು ;

(ಉ) ಇದುವರೆಗೆ ಹಾವೇರಿ ಜಿಲ್ಲೆಯಲ್ಲಿ ಯಾವ ರಸ್ತೆಗಳಿಗೆ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ; (ವಿವರ ನೀಡುವುದು)

(ಊ) ಯಾವ ಯಾವ ರಸ್ತೆಗಳನ್ನು ಕಳಪೆ ಎಂದು ಗುರುತಿಸಲಾಗಿದೆ ; ಆ ಕಳಪೆ ಕಾಮಗಾರಿಗಳಿಗೆ ಕಾರಣರ್‍ಯಾರು ; ಅವರುಗಳ ಮೇಲೆ ಯಾವ ಕ್ರಮ ಜರುಗಿಸಲಾಗಿದೆ ? (ರಸ್ತೆವಾರು ವಿವರ ನೀಡುವುದು)

## ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ದಿನಗೂಲಿ ನೌಕರರ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೭೩೬ (೭೮೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ದಿನಗೂಲಿ ನೌಕರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ಸಂಸ್ಥೆವಾರು ವಿವರ ನೀಡುವುದು)

(ಆ) ಇವರ ಸೇವೆ ಖಾಯಂಯಾತಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಇಲ್ಲವಾದಲ್ಲಿ, ಕಾರಣವೇನು)

(ಇ) ರಾಜ್ಯದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿಗಳಲ್ಲಿ ಸೇವಾ ಖಾಯಾಂಯಾತಿ ಹೊಂದದೆ, ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು ; ಇವರುಗಳ ಸೇವಾ ಖಾಯಂಯಾತಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ದ್ವಿಪಥ ರಸ್ತೆ ನಿರ್ಮಾಣದ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)–**

೭೩೭ (೮೨೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುಮಕೂರಿನಿಂದ ಶಿವಮೊಗ್ಗಕ್ಕೆ ದ್ವಿಪಥ ರಸ್ತೆ ನಿರ್ಮಾಣದ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವಾಗ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುವುದು ;

(ಆ) ಯೋಜನೆಯ ರೂಪುರೇಷಗಳನ್ನು ಸಿದ್ದಪಡಿಸಲಾಗಿದೆಯೇ ; ಸಿದ್ದಪಡಿಸಿದ್ದಲ್ಲಿ, ಅದು ಯಾವ ಹಂತದಲ್ಲಿದೆ ;

(ಇ) ಈ ಯೋಜನೆಗೆ ತಗುಲುವ ಒಟ್ಟು ವೆಚ್ಚವೆಷ್ಟು ಹಾಗೂ ಕಾಮಗಾರಿ ಸಂಪೂರ್ಣಗೊಳಿಸಲು ತೆಗೆದುಕೊಳ್ಳುವ ಸಮಯಾವಕಾಶವೆಷ್ಟು ?

## ಕೃಷಿ ಬೆಳೆ ಆಯೋಗದ ವರದಿ ಮತ್ತು ಬೆಂಬಲ ಬೆಲೆ ಘೋಷಣೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)–**

೭೩೮ (೮೨೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಒಟ್ಟಾರೆ ಎಷ್ಟು ಪ್ರಮಾಣದಲ್ಲಿ ಈರುಳ್ಳಿ ಬೆಳೆ ಬೆಳೆಯಲಾಗುತ್ತಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಕೃಷಿ ಬೆಳೆಗಳಲ್ಲೊಂದಾದ ಈರುಳ್ಳಿ ಬೆಲೆ ಕುಸಿತದಿಂದ ರೈತ ತೀವ್ರ ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಇ) ಕೃಷಿ ಬೆಳೆ ಆಯೋಗದಿಂದ ಸರ್ಕಾರಕ್ಕೆ ವರದಿ ಸಲ್ಲಿಕೆಯಾಗಿದೆಯೇ ; ಆಗಿದ್ದಲ್ಲಿ, ವರದಿಯ ವಿವರ ನೀಡುವುದು ಹಾಗೂ ರೈತರ ಸಂಕಷ್ಟಕ್ಕೆ ಸರ್ಕಾರ ಯಾವ ರೀತಿಯ ಪರಿಹಾರ ನೀಡಿದೆ ;

(ಈ) ಕಳೆದ ೨ ವರ್ಷಗಳಿಂದೀಚೆಗೆ ಯಾವ್ಯಾವ ಕೃಷಿ ಬೆಳೆಗಳಿಗೆ ಸರ್ಕಾರ ಬೆಂಬಲ ಬೆಲೆ ಘೋಷಿಸಿದೆ ; ಘೋಷಿಸಿದ್ದಲ್ಲಿ, ಜಿಲ್ಲಾವಾರು ಬೆಳೆಗಳ ವಿವರದೊಂದಿಗೆ ಒಟ್ಟು ನೀಡಿದ ಪರಿಹಾರ ನಿಧಿಯ ಮಾಹಿತಿ ನೀಡುವುದು ?

## ಪಶುಸಂಗೋಪನಾ ಇಲಾಖೆಯಲ್ಲಿ ಲಸಿಕೆ ತಯಾರಿಕೆ ಮತ್ತು ಮಾರಾಟ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)–**

೭೩೯ (೮೨೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೩ನೇ ಸಾಲಿನಿಂದ ಇಲ್ಲಿಯವರೆಗೆ ಕಾಲುಬಾಯಿ ಜ್ವರ ಖಾಯಿಲೆಗೆ ತುತ್ತಾಗಿ ಸಾವನ್ನಪ್ಪಿರುವ ಜಾನುವಾರುಗಳ ಸಂಖ್ಯೆ ಎಷ್ಟು ; ಈವರೆವಿಗೂ ರಾಜ್ಯದಲ್ಲಿ ಈ ಖಾಯಿಲೆ ನಿಯಂತ್ರಿಸಲು ಎಷ್ಟು ಹಣ ಬಿಡುಗಡೆಗೊಳಿಸಲಾಗಿದೆ ; (ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದ ಲಸಿಕೆ ಸಂಸ್ಥೆ ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಯಿಂದ ಲಸಿಕೆ ಖರೀದಿಸಿದೆಯೇ ; ಕಳೆದ ವರ್ಷದಿಂದ ಈವರೆವಿಗೂ ಎಷ್ಟು ಬಗೆಯ ಲಸಿಕೆಗಳನ್ನು ಎಷ್ಟು ಪ್ರಮಾಣದಲ್ಲಿ ಖರೀದಿಸಿದೆ. ಇದಕ್ಕಾಗಿ ಆ ಸಂಸ್ಥೆಗೆ ಎಷ್ಟು ಹಣ ಪಾವತಿಸಲಾಗಿದೆ ; (ಜಿಲ್ಲಾವಾರು ಆಸ್ಪತ್ರೆಗಳ ಖರೀದಿ ವಿವರ ನೀಡುವುದು)

(ಇ) ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಗೆ ಲಸಿಕೆ ತಯಾರಿಸಲು ಯಾವ ದಿನಾಂಕದಿಂದ ಪರವಾನಗಿ ನೀಡಿದೆ ; ಪರವಾನಗಿ ರದ್ದಾಗಿದ್ದಲ್ಲಿ, ನವೀಕರಣಕ್ಕೆ ಮಾಡಿರುವ ಪ್ರಯತ್ನಗಳೇನು ;

(ಈ) ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆ ೨೦೧೩ ರಿಂದ ಇಲ್ಲಿಯವರೆಗೆ ತಯಾರಿಸಿರುವ ಲಸಿಕೆಗಳು ಯಾವುವು ; ಅದರ ಪ್ರಮಾಣ ಎಷ್ಟು ; ಮಾರಾಟ ಮಾಡಿರುವುದರಿಂದ ಗಳಿಸಿದ ಆದಾಯ ಎಷ್ಟು ; ಪಶುಸಂಗೋಪನಾ ಇಲಾಖೆಯಿಂದ ಸದರಿ ಲಸಿಕೆಯನ್ನು ಖರೀದಿಸಲಾಗಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ರೈತರ ಈರುಳ್ಳಿಗೆ ವೈಜ್ಞಾನಿಕ ಬೆಲೆ ನಿಗಧಿ ಮತ್ತು ಖರೀದಿ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೭೪೦ (೮೧೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಯಾವ ಯಾವ ಪ್ರದೇಶದಲ್ಲಿ, ಎಷ್ಟು ಎಕರೆ ಪ್ರದೇಶದಲ್ಲಿ ಈರುಳ್ಳಿ ಬೆಳೆಯನ್ನು ಬೆಳೆಯಲಾಗಿದೆ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಬರ ಪರಿಸ್ಥಿತಿ ಕಾಲ ಘಟ್ಟದಲ್ಲೂ ರೈತರು ಕಷ್ಟಪಟ್ಟು ಬೆಳೆದ ಈರುಳ್ಳಿಯ ಬೆಲೆ ಕುಸಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ರೈತರು ಬೆಳೆದ ಈರುಳ್ಳಿಗೆ ವೈಜ್ಞಾನಿಕ ಬೆಲೆ ನಿಗಧಿ ಮಾಡಿ, ರೈತನ ಸಂಕಷ್ಟಕ್ಕೆ ಸಹಾಯ ಹಸ್ತ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಅದಕ್ಕೆ ನಿಗಧಿ ಮಾಡಿರುವ ಹಣವೆಷ್ಟು ;

(ಈ) ರೈತರಿಂದ ಈರುಳ್ಳಿ ಖರೀದಿಸಲು ಯಾವ ಯಾವ ಭಾಗದಲ್ಲಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ; ಯಾವ ದರದಲ್ಲಿ ರೈತರಿಂದ ಈರುಳ್ಳಿಯನ್ನು ಖರೀದಿಸಲಾಗುತ್ತದೆ ;

(ಉ) ಇಲ್ಲಿಯವರೆಗೂ ಎಷ್ಟು ಪ್ರಮಾಣದಷ್ಟು ಈರುಳ್ಳಿಯನ್ನು ರೈತರಿಂದ ಖರೀದಿಸಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ರಾಷ್ಟ್ರೀಯ ರಾಜ್ಯ ಮತ್ತು ಜಿಲ್ಲಾ ಮುಖ್ಯ ರಸ್ತೆಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೭೪೧ (೮೨೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಎಷ್ಟು ಕಿ.ಮೀ. ಉದ್ದದಲ್ಲಿ ರಾಷ್ಟ್ರೀಯ, ರಾಜ್ಯ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳು ಅಸ್ತಿತ್ವದಲ್ಲಿವೆ ;

(ಆ) ಯಾವ ಯಾವ ತಾಲ್ಲೂಕುಗಳಲ್ಲಿ ರಸ್ತೆಗಳು ಹಾದು ಹೋಗಿವೆ ; (ರಸ್ತೆವಾರು ಮಾಹಿತಿ ನೀಡುವುದು)

(ಇ) ಈ ರಸ್ತೆಗಳ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಇದುವರೆಗೆ ಯಾವ ರಸ್ತೆಗೆ, ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ; (ವಿವರ ನೀಡುವುದು)

(ಉ) ಯಾವ ಯಾವ ರಸ್ತೆಗಳ ಕಾಮಗಾರಿ ಕಳಪೆ ಎಂದು ಗುರುತಿಸಲಾಗಿದೆ ; ಆ ಕಳಪೆ ಕಾಮಗಾರಿಗಳಿಗೆ ಕಾರಣರ್ಯಾರು ; ಅವರುಗಳ ಮೇಲೆ ಯಾವ ಕ್ರಮ ಜರುಗಿಸಲಾಗಿದೆ ? (ರಸ್ತೆವಾರು ವಿವರ ನೀಡುವುದು)

## ನಂದಿ ಮತ್ತು ಕೆಮ್ಮಣ್ಣು ಗಿರಿಧಾಮ ಕೇಂದ್ರಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೭೪೨ (೮೧೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಗಿರಿಧಾಮ ಮತ್ತು ಚಿಕ್ಕಮಗಳೂರು ಜಿಲ್ಲೆಯ ಕೆಮ್ಮಣ್ಣುಗುಂಡಿ ಗಿರಿಧಾಮಗಳ ವಿಸ್ತೀರ್ಣವೆಷ್ಟು ; ಆ ಗಿರಿಧಾಮಗಳು ಸಮುದ್ರ ಮಟ್ಟದಿಂದ ಎಷ್ಟು ಎತ್ತರದಲ್ಲಿವೆ ;

(ಆ) ಇವುಗಳನ್ನು ಸರ್ಕಾರ ಪ್ರವಾಸೋದ್ಯಮ ಕೇಂದ್ರಗಳನ್ನಾಗಿ ಗುರುತಿಸಲಾಗಿದೆಯೇ;

(ಇ) ಹಾಗಿದ್ದಲ್ಲಿ, ಈ ಗಿರಿಧಾಮಗಳ ಅಭಿವೃದ್ಧಿಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು ; ಆ ಗಿರಿಧಾಮಗಳಲ್ಲಿ ಯಾವ ಯಾವ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆ ? (ವಿವರ ನೀಡುವುದು)

## SCP/TSP ಅನುದಾನ ಬಳಕೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೭೪೩ (೮೧೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೃಷಿ ಇಲಾಖೆಯಡಿಯಲ್ಲಿ ಕಳೆದ ೩ ವರ್ಷಗಳಿಂದ SCP/TSP ಅಡಿಯಲ್ಲಿ ಮಂಜೂರಾದ ಹಣ ಎಷ್ಟು ; ಬಾಕಿ ಉಳಿದಿರುವ ಹಣ ಎಷ್ಟು ; ಖರ್ಚಾದ ಹಣ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆ ಅಡಿಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಜಾರಿಗೊಳಿಸಿವೆ;

(ಇ) ಈ ಸೌಲಭ್ಯದ ಅಡಿಯಲ್ಲಿ ಉಪಕರಣಗಳನ್ನು ಕೊಳ್ಳಲು ಲಭ್ಯ ಇರುವ ಸಹಾಯಧನವನ್ನು ಫಲಾನುಭವಿಗಳ ಉಪಕರಣಗಳನ್ನು ಕೊಂಡ ನಂತರ ನೀಡಲಾಗುತ್ತಿದೆಯೇ ;

(ಈ) ಹಾಗಿದ್ದಲ್ಲಿ, ಈ ಬದಲಾವಣೆಯಿಂದಾಗಿ ಫಲಾನುಭವಿಗಳು ಸೌಲಭ್ಯ ಪಡೆಯಲು ಆಗುತ್ತಿರುವ ಆರ್ಥಿಕ ಹೊರೆ ಮತ್ತು ಸೌಲಭ್ಯ ಪಡೆಯಲು ಆಗುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಫಲಾನುಭವಿಗಳಿಗೆ ಸರ್ಕಾರವು ಉಪಕರಣಗಳನ್ನು ಕೊಳ್ಳುವ ಮೊದಲು ಸಹಾಯಧನವನ್ನು ಮಂಜೂರು ಮಾಡಲು ಇರುವ ತೊಂದರೆ ಏನು ?

## SCP/TSP ಕೃಷಿ ಹಾಗೂ ತೋಟಗಾರಿಕೆ ಇಲಾಖೆಯಡಿಯಲ್ಲಿ ಅನುದಾನ ಬಳಕೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೭೪೪ (೮೧೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತೋಟಗಾರಿಕೆ ಇಲಾಖೆ ಅಡಿಯಲ್ಲಿ ಕಳೆದ ೩ ವರ್ಷಗಳಿಂದ SCP/TSP ಅಡಿಯಲ್ಲಿ ಮಂಜೂರಾದ ಹಣ ಎಷ್ಟು ; ಬಾಕಿ ಉಳಿದಿರುವ ಹಣ ಎಷ್ಟು; ಖರ್ಚಾದ ಹಣ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆ ಅಡಿಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದೆ ;

(ಇ) ಈ ಸೌಲಭ್ಯದ ಅಡಿಯಲ್ಲಿ ಉಪಕರಣಗಳನ್ನು ಕೊಳ್ಳಲು ಲಭ್ಯ ಇರುವ ಸಹಾಯಧನವನ್ನು ಫಲಾನುಭವಿಗಳ ಉಪಕರಣಗಳನ್ನು ಕೊಂಡ ನಂತರ ನೀಡಲಾಗುತ್ತಿದೆಯೇ ;

(ಈ) ಹಾಗಿದ್ದಲ್ಲಿ, ಈ ಬದಲಾವಣೆಯಿಂದಾಗಿ ಫಲಾನುಭವಿಗಳು ಸೌಲಭ್ಯ ಪಡೆಯಲು ಆಗುತ್ತಿರುವ ಆರ್ಥಿಕ ಹೊರೆ ಮತ್ತು ಸೌಲಭ್ಯ ಪಡೆಯಲು ಆಗುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಫಲಾನುಭವಿಗಳಿಗೆ ಸರ್ಕಾರವು ಉಪಕರಣಗಳನ್ನು ಕೋಳ್ಳುವ ಮೊದಲು ಸಹಾಯಧನವನ್ನು ಮಂಜೂರು ಮಾಡಲು ಇರುವ ತೊಂದರೆ ಏನು ?

## ಗಂಗಾಕಲ್ಯಾಣ ಯೋಜನೆಯಡಿ ಮಂಜೂರಾದ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೭೪೫ (೮೩೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪–೧೫, ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಮಂಜೂರಾದ ಎಷ್ಟು ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗಿದೆ ; ವಿದ್ಯುತ್ ಸಂಪರ್ಕ ಕಲ್ಪಿಸಬೇಕಾಗಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು–ವರ್ಷಾವಾರು ಮಾಹಿತಿ ನೀಡುವುದು)

(ಆ) ಸದರಿ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲು ಸರ್ಕಾರದ ಬೊಕ್ಕಸಕ್ಕೆ ವೆಚ್ಚವಾದ ಮೊತ್ತವೆಷ್ಟು ; ಈ ಮೊತ್ತವನ್ನು ಯಾವ ಮೂಲದಿಂದ ಭರಿಸಲಾಗುವುದು ;

(ಇ) ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಮಂಜೂರಾದ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ನೀಡದೆ ಇಲಾಖೆಯ ಅಧಿಕಾರಿ/ಸಿಬ್ಬಂದಿ ತಡ ಮಾಡುತ್ತಿರುವುದರಿಂದ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದ ವರ್ಗದ ರೈತರು ತುಂಬಾ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದರೆ, ಸರ್ಕಾರ ಈ ಬಗ್ಗೆ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳುವುದು; ಬಾಕಿ ಇರುವ ಕೊಳವೆ ಬಾವಿಗಳಿಗೆ ಸಂಪರ್ಕ ಕಲ್ಪಿಸಲು ಸರ್ಕಾರ ತೆಗೆದುಕೊಳ್ಳುವ ಕಾಲಾವಕಾಶ ಎಷ್ಟು ?

## ರಾಜ್ಯದ ರೈತರಿಗೆ ನೀಡುತ್ತಿರುವ ಸಬ್ಸಿಡಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೭೪೬ (೮೩೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ರೈತರಿಗೆ ಸರ್ಕಾರದಿಂದ ಸಬ್ಸಿಡಿ ನೀಡಲಾಗುತ್ತಿರುವ ಕೃಷಿ ವಿಧಾನಗಳು ಮತ್ತು ಕೃಷಿ ಉಪಕರಣಗಳಾವುವು ;

(ಆ) ಹನಿ ನೀರಾವರಿ ಹಾಗೂ ತುಂತುರು ನೀರಾವರಿ ಯೋಜನೆಗಳನ್ನು ಅಳವಡಿಸಲು ರೈತರಿಗೆ ಸಬ್ಸಿಡಿ ನೀಡಲಾಗುತ್ತಿದೆಯೇ ;

(ಇ) ಹಾಗಿದ್ದಲ್ಲಿ, ನೀಡಲಾಗುತ್ತಿರುವ ಸಬ್ಸಿಡಿ ಪ್ರಮಾಣವೆಷ್ಟು ;

(ಈ) ಇಲ್ಲಿಯವರೆಗೆ ಇದರ ಪ್ರಯೋಜನ ಪಡೆದುಕೊಂಡಿರುವ ರೈತರ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಕೋಲಾರ ಜಿಲ್ಲೆ ಮುಳಬಾಗಿಲು ಪುರಸಭೆಯಲ್ಲಿ ಸಿಬ್ಬಂದಿ ಕೊರತೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೭೫೭ (೮೩೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪೌರಾಡಳಿತ ಕಾಯ್ದೆಯ ರೀತ್ಯಾ ಒಂದು ಪುರಸಭೆಗೆ ಅವಶ್ಯವಿರುವ ಕಾರ್ಮಿಕರ ಸಂಖ್ಯೆ ಎಷ್ಟು ;

(ಆ) ಕೋಲಾರ ಜಿಲ್ಲೆ, ಮುಳಬಾಗಿಲು ಪುರಸಭೆಯ ವ್ಯಾಪ್ತಿಯಲ್ಲಿ ಒಳಪಡುವ ಜನಸಂಖ್ಯೆ ಎಷ್ಟು ;

(ಇ) ಸದರಿ ಪುರಸಭೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾಯಂ ಸಿಬ್ಬಂದಿ, ನಿಯುಕ್ತಿ ಸೇವೆಯಲ್ಲಿರುವ ಹಾಗೂ ಗುತ್ತಿಗೆ ಆಧಾರದ ಮೇಲೆ ಬಂದ ನೌಕರರ ಸಂಖ್ಯೆ ಎಷ್ಟು ; ಹಾಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಈ) ಸಿಬ್ಬಂದಿ ಮತ್ತು ಪೌರ ಕಾರ್ಮಿಕರ ಕೊರತೆಯಿಂದಾಗಿ ಸದರಿ ಪುರಸಭಾ ವ್ಯಾಪ್ತಿಯಲ್ಲಿ ಸ್ವಚ್ಚತಾ ಕಾರ್ಯ ಒಳಗೊಂಡಂತೆ ಕಛೇರಿ ಕಾರ್ಯಗಳಿಗೂ ಸಾರ್ವಜನಿಕರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಮುಳಬಾಗಿಲು ಪುರಸಭಾ ವ್ಯಾಪ್ತಿಯಲ್ಲಿ ಒಂದೇ ಒಂದು ಉದ್ಯಾನವನ ಇಲ್ಲದಿರುವುದನ್ನು ಸರ್ಕಾರ ಮನಗಂಡಿದೆಯೇ ;

(ಊ) ಹಾಗಿದ್ದಲ್ಲಿ, ಸಾರ್ವಜನಿಕರ ಅನುಕೂಲಕ್ಕಾಗಿ ಉದ್ಯಾನವನ ಸ್ಥಾಪಿಸಿ ಅದನ್ನು ಅಭಿವೃದ್ಧಿಗೊಳಿಸಲು ಸರ್ಕಾರ ಮುಂದಾಗುವುದೇ ? (ವಿವರ ನೀಡುವುದು)

## ಕೃಷಿ ಮಾರುಕಟ್ಟೆಗಳಿಂದ ಸರ್ಕಾರಕ್ಕೆ ಬರುವ ಆದಾಯ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೭೫೮ (೮೫೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಒಟ್ಟು ಕೃಷಿ ಮಾರುಕಟ್ಟೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಕೃಷಿ ಮಾರುಕಟ್ಟೆಗಳಿಂದ ಕಳೆದ ಮೂರು ವರ್ಷಗಳಲ್ಲಿ ತೆರಿಗೆ ಮತ್ತು ಇತರೆ ಮೂಲಗಳಿಂದ ಸರ್ಕಾರದ ಬೊಕ್ಕಸಕ್ಕೆ ಬಂದಿರುವ ಆದಾಯವೆಷ್ಟು ;

(ಇ) ಈ ರೀತಿ ಬಂದಂತಹ ಆದಾಯವನ್ನು ಯಾವ ಯಾವ ಉದ್ದೇಶಕ್ಕೆ ವೆಚ್ಚ ಮಾಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಬೆಂಗಳೂರು ಕಬ್ಬನ್ ಉದ್ಯಾನವನದ ಅಭಿವೃದ್ಧಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೭೪೯ (೮೩೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಪ್ರತಿಷ್ಠಿತ ಉದ್ಯಾನವನಗಳಲ್ಲಿ ಪ್ರಮುಖವಾದ ಕಬ್ಬನ್ ಉದ್ಯಾನವನದ ಒಟ್ಟು ವಿಸ್ತೀರ್ಣವೆಷ್ಟು ;

(ಆ) ಉದ್ಯಾನವನದ ನಿರ್ವಹಣೆಗಾಗಿ ಪ್ರತಿ ವರ್ಷ ವೆಚ್ಚ ಮಾಡುತ್ತಿರುವ ಮೊತ್ತವೆಷ್ಟು;

(ಇ) ಪ್ರವಾಸಿಗರನ್ನು ತನ್ನತ್ತ ಸೆಳೆಯಲು ಸದರಿ ಉದ್ಯಾನವನವನ್ನು ಅಭಿವೃದ್ಧಿಪಡಿಸಲು ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳೇನು ;

(ಈ) ಸದರಿ ಉದ್ಯಾನವನದಲ್ಲಿ ಅನೈತಿಕ ಚಟುವಟಿಕೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ?

## ಬೀದರ್ ಜಿಲ್ಲೆಯ ರಾಜ್ಯ, ರಾಷ್ಟ್ರೀಯ ಹೆದ್ದಾರಿಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫೦ (೮೮೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯ ಮಾರ್ಗವಾಗಿ ಹಾದು ಹೋಗುತ್ತಿರುವ ರಾಜ್ಯ ಮುಖ್ಯ ರಸ್ತೆಯು ರಾಷ್ಟ್ರೀಯ ಹೆದ್ದಾರಿಯಲ್ಲಿ ಎಷ್ಟು ಕಿ.ಮೀ. ವ್ಯಾಪ್ತಿಯವರೆಗೆ ಹರಿದಿದೆ;

(ಆ) ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಸ್ಥಿತಿಗತಿಗಳೇನು ;

(ಇ) ಜಿಲ್ಲಾ ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ? (ಕಾಮಗಾರಿ ವಿವರ ನೀಡುವುದು)

## ಬೀದರ್ ಜಿಲ್ಲೆ ಪಶು ವಿಶ್ವವಿದ್ಯಾನಿಲಯದಲ್ಲಿ ನೇಮಕಾತಿಯ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫೧ (೮೮೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯ ಪಶು ವೈದ್ಯಕೀಯ ವಿಶ್ವ ವಿದ್ಯಾನಿಲಯ ವಾಪ್ತಿಯಲ್ಲಿ ನೇಮಕಾತಿ ಪ್ರಕ್ರಿಯೆ ನಡೆದಿದೆಯೇ ; (ಮಾಹಿತಿಯನ್ನು ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕ ಭಾಗದವರಿಗೆ ವಿಶೇಷ ಮೀಸಲಾತಿ ಅಡಿ ನೇಮಕಾತಿಯಲ್ಲಿ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಪಶು ಪಾಲಿ ಕ್ಲಿನಿಕನ್ನು ಬೀದರ್‌ನಿಂದ ಬೇರೆಡೆಗೆ ಸ್ಥಳಾಂತರಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ಬೀದರ್ ಜಿಲ್ಲೆಯಲ್ಲಿ ಅತಿವೃಷ್ಟಿ, ಅನಾವೃಷ್ಟಿಯಿಂದ ನಾಶವಾದ ಬೆಳೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫೨ (೮೮೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಕೃಷಿ ಆಧಾರಿತ ಬೆಳೆಗಳು ಅತಿವೃಷ್ಠಿ ಹಾಗೂ ಅನಾವೃಷ್ಠಿಯಿಂದ ನಾಶವಾದ ಪ್ರಮಾಣ ಎಷ್ಟು ; (ಬೆಳೆವಾರು ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಆತ್ಮಹತ್ಯೆ ಮಾಡಿಕೊಂಡಿರುವ ರೈತರ ಸಂಖ್ಯೆ ಎಷ್ಟು ; ಅವರಿಗೆ ಪರಿಹಾರ ನೀಡಲಾಗಿದೆಯೇ ? (ತಾಲ್ಲೂಕುವಾರು ಹಾಗೂ ರೈತವಾರು ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯ ಸಹಕಾರಿ ಸಕ್ಕರೆ ಕಾರ್ಖಾನೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫೩ (೮೭೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಸಹಕಾರ ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿವೆ; ಅವುಗಳ ಸಾಮರ್ಥ್ಯ ಎಷ್ಟು ;

(ಆ) ಬೀದರ್ ಜಿಲ್ಲೆಯಲ್ಲಿ ಸಹಕಾರ ಸಕ್ಕರೆ ಕಾರ್ಖಾನೆಗಳಲ್ಲಿ ಉತ್ಪತ್ತಿಯಾಗುವ ಉಪ ಉತ್ಪನ್ನಗಳು ಯಾವುವು ; (ವಿವರ ನೀಡುವುದು)

(ಇ) ಈ ಉಪ ಉತ್ಪನ್ನಗಳಿಂದ ಕಾರ್ಖಾನೆಗೆ ಬಂದಿರುವ ಲಾಭ ನಷ್ಟಗಳು ಎಷ್ಟು;

(ಈ) ಕಳೆದ ೫ ವರ್ಷದಿಂದ ಬೀದರ್ ಜಿಲ್ಲೆಯ ಸಹಕಾರ ಸಕ್ಕರೆ ಕಾರ್ಖಾನೆಗಳ ಪೈಕಿ ಯಾವ ಯಾವ ಕಾರ್ಖಾನೆಗಳು ಎಷ್ಟು ಲಾಭದಲ್ಲಿದೆ ;

(ಉ) ಕಾರ್ಖಾನೆಗಳು ಸಕ್ಕರೆ ಮಾರಾಟವನ್ನು ಯಾವ ದರದಲ್ಲಿ ಮಾರಾಟ ಮಾಡುತ್ತಿವೆ? (ವಿವರ ನೀಡುವುದು)

## ಬೀದರ್ ಜಿಲ್ಲೆ, ಔರಾದ್ ತಾಲ್ಲೂಕಿನ ಕೆಲವು ಹಳ್ಳಿಗಳಿಗೆ ವಿದ್ಯುತ್ ಸಂಪರ್ಕ ಇಲ್ಲದಿರುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫೪ (೮೮೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆ, ಔರಾದ್ ತಾಲ್ಲೂಕಿನಲ್ಲಿ ಕೆಲವು ಹಳ್ಳಿಗಳಿಗೆ ವಿದ್ಯುತ್ ಸಂಪರ್ಕ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿದ್ಯುತ್ ಸಂಪರ್ಕ ಕಲ್ಪಿಸದಿರಲು ಕಾರಣಗಳೇನು ;

(ಇ) ವಿದ್ಯುತ್ ಸಂಪರ್ಕ ಕಲ್ಪಿಸಿ ಆ ಭಾಗದ ಜನರಿಗೆ ಅನುಕೂಲ ಮಾಡಿಕೊಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೆಂಗಳೂರು–ದಿಂಡಿಗಲ್ ರಾಷ್ಟ್ರಿಯ ಹೆದ್ದಾರಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫೫ (೮೧೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತ ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು, ಕನಕಪುರ, ಮಳವಳ್ಳಿ ಕೊಳ್ಳೆಗಾಲ ಚಾಮರಾಜನಗರ ಮೂಲಕ ಹಾದು ಹೋಗುವ ಬೆಂಗಳೂರು–ದಿಂಡಿಗಲ್ ರಾಷ್ಟ್ರೀಯ ಹೆದ್ದಾರಿಯನ್ನು ಅಭಿವೃದ್ಧಿಪಡಿಸಿ ಚತುಷ್ಪಥ ರಸ್ತೆಯನ್ನಾಗಿ ಮಾಡುವ ಬಗ್ಗೆ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಆ) ಈ ರಸ್ತೆಯ ಅಗಲೀಕರಣ ಹಾಗೂ ರಸ್ತೆಯನ್ನು ಮೇಲ್ದರ್ಜೆಗೆ ಏರಿಸುವ ಬಗ್ಗೆ ಇದುವರೆಗೆ ಮಂಜೂರು ಮಾಡಿ, ಬಿಡುಗಡೆ ಮಾಡಿರುವ ಹಣ ಎಷ್ಟು ; ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿವೆ ; ಯಾವ ಯಾವ ಕಾಮಗಾರಿಗಳು ಪ್ರಗತಿಯಲ್ಲಿವೆ ; (ವಿವರ ಒದಗಿಸುವುದು) ಈ ರಾಷ್ಟ್ರೀಯ ಹೆದ್ದಾರಿಯ ವಿಸ್ತರಣೆಗೆ ಅಗತ್ಯವಾದ ಭೂಸ್ವಾಧೀನ ಕಾರ್ಯ ಆಗಿದೆಯೇ ; ಎಷ್ಟು ಎಕರೆ ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ?

## ತಿ. ನರಸೀಪುರ ಪಟ್ಟಣದ ಅಭಿವೃದ್ಧಿಗೆ ಕೈಗೊಂಡಿರುವ ಯೋಜನೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫೬ (೮೧೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತಿ. ನರಸೀಪುರವನ್ನು ಪುರಸಭೆ ಎಂದು ಘೋಷಿಸಿದ ನಂತರ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳು ಯಾವುವು ; ಈ ಕಾಮಗಾರಿಗಳಿಗೆ ಮಂಜೂರು ಮಾಡಿದ, ಬಿಡುಗಡೆ ಮಾಡಿದ ಮತ್ತು ಖರ್ಚು ಮಾಡಿರುವ ಅನುದಾನ ಎಷ್ಟು ; ಸದರಿ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿವೆ ; (ಕಾಮಗಾರಿವಾರು ವಿವರ ನೀಡುವುದು)

(ಆ) ತಿ.ನರಸೀಪುರವನ್ನು ಸಬರ್‌ಮತಿ ಮಾದರಿಯಲ್ಲಿ ಅಭಿವೃದ್ಧಿ ಮಾಡಲಾಗುವುದೇ; (ವಿವರಗಳನ್ನು ಒದಗಿಸುವುದು)

(ಇ) ತಿ.ನರಸೀಪುರವು ಪ್ರವಾಸಿತಾಣ ಹಾಗೂ ಧಾರ್ಮಿಕ ಕ್ಷೇತ್ರ ಆಗಿರುವುದರಿಂದ, ಮುಖ್ಯವಾಗಿ ಪ್ರವಾಸಿಗರಿಗೆ, ಭಕ್ತಾದಿಗಳಿಗೆ ಅನುಕೂಲವಾಗುವಂತಹ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ?

## ಆನೆಚೌಕೂರು–ಪಿರಿಯಾಪಟ್ಟಣ ನಡುವಿನ ರಾಜ್ಯ ಹೆದ್ದಾರಿ ನಿರ್ಮಾಣ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫೭ (೮೧೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಆನೆಚೌಕೂರು–ಪಿರಿಯಾಪಟ್ಟಣ ನಡುವಿನ ರಾಜ್ಯ ಹೆದ್ದಾರಿಯ ನಿರ್ಮಾಣ ಕಾಮಗಾರಿಯು ಯಾವ ಹಂತದಲ್ಲಿದೆ ; ಇದಕ್ಕೆ ಒದಗಿಸಿರುವ ಅನುದಾನ ಎಷ್ಟು ; ಕಾಮಗಾರಿ ಯಾವಾಗ ಮುಕ್ತಾಯವಾಗಲಿದೆ ; ಕಾಮಗಾರಿಯು ಕಳಪೆಯಾಗಿದೆ ಎಂಬುದರ ಬಗ್ಗೆ ಸಾರ್ವಜನಿಕರಿಂದ ದೂರುಗಳ ಬಂದಿವೆಯೇ;

(ಆ) ಈ ರಾಜ್ಯ ಹೆದ್ದಾರಿ ನಿರ್ಮಾಣದಲ್ಲಿ ರಸ್ತೆಯ ಅಗಲೀಕರಣಕ್ಕೆ ತಕ್ಕಂತೆ, ರಸ್ತೆಯ ಬದಿಯಲ್ಲಿಯೇ ಇರುವ ವಿದ್ಯುತ್ ಕಂಬಗಳು, ಮರಗಳು ಇವುಗಳನ್ನು ತೆರವು ಮಾಡದೇ ರಸ್ತೆಯನ್ನು ನಿರ್ಮಿಸುತ್ತಿರುವುದು ಗಮನಕ್ಕೆ ಬಂದಿದೆಯೇ; ಇವುಗಳನ್ನು ತೆರವು ಮಾಡಿ ರಸ್ತೆ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?

## ಜಾನುವಾರುಗಳಿಗೆ ಮೇವಿನ ಕೊರತೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫೮ (೮೧೪) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಬರ ಪರಿಸ್ಥಿತಿಯಿಂದಾಗಿ ಮುಂದಿನ ದಿನಗಳಲ್ಲಿ ಜಾನುವಾರುಗಳಿಗೆ ಹಸಿ ಮೇವಿನ ತೀವ್ರ ಅಭಾವ ಉಂಟಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮೇವಿನ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಿದೆ ?

## ರಾಮನಗರ ಹಾಗೂ ಚಾಮರಾಜನಗರ ಜಿಲ್ಲೆಗಳಿಗೆ ಬಿಡುಗಡೆ ಮಾಡಲಾದ ಅನುದಾನದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೭೫೯ (೮೨೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಮೂರು ವರ್ಷಗಳಲ್ಲಿ ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ರೇಷ್ಮೆ ಇಲಾಖೆಯ ರಾಜ್ಯ ವಲಯ ಹಾಗೂ ಕೇಂದ್ರ ವಲಯಗಳಿಗೆ ವಿವಿಧ ಲೆಕ್ಕಶೀರ್ಷಿಕೆಗಳ ಅಡಿಯಲ್ಲಿ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು ; (ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಆ) ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ರೇಷ್ಮೆ ಇಲಾಖೆಗೆ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನದಲ್ಲಿ ಅನುಷ್ಠಾನಗೊಳಿಸಲಾದ ಕಾಮಗಾರಿಗಳಾವುವು ;

(ಇ) ಸರ್ಕಾರವು ಬಿಡುಗಡೆ ಮಾಡಿರುವ ಅನುದಾನದಲ್ಲಿ ಖರ್ಚು ಮಾಡಲಾದ ಮೊತ್ತ ಎಷ್ಟು ; ಖರ್ಚಾಗದೇ ಉಳಿದ ಮೊತ್ತ ಎಷ್ಟು ; ಖರ್ಚಾಗದಿರಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಳ್ಳುವಲ್ಲಿ ವಿಫಲರಾದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ರೇಷ್ಮೆ ಉತ್ಪಾದನೆ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೭೬೦ (೮೨೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಪ್ರತಿ ವರ್ಷ ಎಷ್ಟು ಟನ್ ರೇಷ್ಮೆಯನ್ನು ಉತ್ಪಾದಿಸಲಾಗುತ್ತಿದೆ ಹಾಗೂ ರಾಜ್ಯಕ್ಕೆ ಅವಶ್ಯಕತೆ ಇರುವ ರೇಷ್ಮೆ ಪ್ರಮಾಣವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ರೇಷ್ಮೆ ಕೊರತೆಯನ್ನು ನೀಗಿಸಲು ಆಮದು ಮಾಡಿಕೊಳ್ಳಲಾಗುವ ರೇಷ್ಮೆಯ ಪ್ರಮಾಣವೆಷ್ಟು ; ಕಳೆದ ಮೂರು ವರ್ಷಗಳಲ್ಲಿ ಕೊರತೆಯಿರುವ ಎಷ್ಟು ಪ್ರಮಾಣದ ರೇಷ್ಮೆಯನ್ನು ಆಮದು ಮಾಡಿಕೊಳ್ಳಲಾಗಿದೆ ; ಇದಕ್ಕಾಗಿ ಸರ್ಕಾರ ವೆಚ್ಚ ಮಾಡಲಾದ ಅನುದಾನವೆಷ್ಟು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಉತ್ಪತ್ತಿಯಾಗುವ ರೇಷ್ಮೆಗೂ ಹಾಗೂ ಆಮದು ಮಾಡಿಕೊಳ್ಳಲಾಗುವ ರೇಷ್ಮೆಗೂ ಬೆಲೆಯಲ್ಲಿ ಅಂತರವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಈ ಅಂತರದಿಂದಾಗಿ ರಾಜ್ಯದ ರೇಷ್ಮೆ ಬೆಳೆಗಾರರು ನಷ್ಟವನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ರೇಷ್ಮೆ ಬೆಳೆಗಾರರಿಗೆ ನಷ್ಟವನ್ನು ಸರಿದೂಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ಪೂರ್ಣ ಮಾಹಿತಿ ನೀಡುವುದು ?

## ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಶಿವನೂರ ಹಳ್ಳಕ್ಕೆ ಸೇತುವೆ ನಿರ್ಮಿಸುವ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೬೧ (೮೩೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಶಿವಣೂರ ಹಾಗೂ ಕಿರಣಗಿ ಗ್ರಾಮಗಳ ಮಧ್ಯದಲ್ಲಿ ಇರುವ ಹಳ್ಳಕ್ಕೆ ರೈತರಿಗೆ ಧವಸಧಾನ್ಯ, ಕಬ್ಬು ಸಾಗಿಸಲು ಮತ್ತು ಸಾರ್ವಜನಿಕರಿಗೆ ಸೇತುವೆ ಅವಶ್ಯಕತೆ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಯೋಜನೆಗೆ ನಿಗಧಿಪಡಿಸಿದ ಅನುದಾನವೆಷ್ಟು ; ಇದಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆಯೇ ; ಯಾವ ಕಾಲಮಿತಿಯೊಳಗೆ ಕಾಮಗಾರಿ ಪೂರ್ಣಗೊಳಿಸಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆಗೆ ಇದುವರೆಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ಹಾಗೂ ಖರ್ಚು ಮಾಡಿದ ಅನುದಾನ ಎಷ್ಟು ? (ವಿವರ ನೀಡುವುದು)

## ಸಹಕಾರ ಸಂಘಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೬೨ (೮೩೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸಹಕಾರ ಸಂಘಗಳನ್ನು ಸ್ಥಾಪಿಸಲು ಇರುವ ಮಾನದಂಡಗಳೇನು; ಸಹಕಾರ ಸಂಘದ ಬೈಲಾ ಕಾಪಿ ಸಹಿತ ಸಂಪೂರ್ಣ ಮಾಹಿತಿ ನೀಡುವುದು;

(ಆ) ಸಹಕಾರ ಸಂಘಗಳ ಮೂಲಕ ಸಾರ್ವಜನಿಕರಿಗೆ ದೊರೆಯಬಹುದಾದಂತಹ ಅರ್ಹತೆಗಳೇನು ; (ಸಂಪೂರ್ಣ ವಿವರಗಳನ್ನು ನೀಡುವುದು)

(ಇ) ಸಹಕಾರ ಸಂಘಗಳಲ್ಲಿ ನಿರ್ದೇಶಕರಾಗಲು ಸದಸ್ಯರು ಹೊಂದಿರಬೇಕಾದ ಅರ್ಹತೆಗಳೇನು ; (ಸಂಪೂರ್ಣ ವಿವರಗಳನ್ನು ನೀಡುವುದು)

(ಈ) ಸಹಕಾರ ಸಂಘಗಳಲ್ಲಿ ಸದಸ್ಯರಾಗಲು ಕನಿಷ್ಠ ಮತ್ತು ಗರಿಷ್ಠ ಎಷ್ಟು ಸದಸ್ಯತ್ವದ ಷೇರು ಹಣ ಪಾವತಿಸಬೇಕಾಗಿದೆ ; (ಮಾಹಿತಿ ನೀಡುವುದು)

(ಉ) ಸಹಕಾರ ಸಂಘಗಳ ಸ್ಥಾಪನೆಗೆ ಸರ್ಕಾರದಿಂದ ದೊರೆಯಬಹುದಾದ ಸವಲತ್ತುಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ?

## ಕಲಬುರಗಿ ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಯ ಯೋಜನೆಗಳಿಗೆ ಸಂಬಂಧಿಸಿದಂತೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) –**

೭೬೩ (೮೩೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷಗಳಲ್ಲಿ ಕಲುಬುರಗಿ ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಯಿಂದ ಹಾಕಿಕೊಂಡಿರುವ ಯೋಜನೆಗಳು ಯಾವುವು ;

(ಆ) ಇಂತಹ ಯೋಜನೆಗಳಿಗಾಗಿ ಎಷ್ಟು ಅನುದಾನವನ್ನು ಮೀಸಲಿರಿಸಲಾಗಿದೆ; ಇದರಲ್ಲಿ ಬಳಸಿಕೊಂಡಿರುವ ಅನುದಾನ ಎಷ್ಟು ; (ವಿವರ ಒದಗಿಸುವುದು)

(ಇ) ಈ ಯೋಜನೆಗಳಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ವಲಯಗಳ ಯೋಜನೆಗಳಾವುವು ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ರಸ್ತೆಗಳ ದುರಸ್ಥಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೭೬೪ (೮೮೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿ ರಸ್ತೆಗಳು ಹಾಳಾಗಿ ಸಾರ್ವಜನಿಕರಿಗೆ ಹಾಗೂ ಪ್ರವಾಸಿಗರಿಗೆ ತೀವ್ರ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ರಸ್ತೆಗಳನ್ನು ದುರಸ್ಥಿ ಮಾಡಲು ಕೈಗೊಂಡಿರುವ ಕ್ರಮಗಳೇನು;

(ಇ) ೨೦೧೫–೧೬ನೇ ಸಾಲಿನಲ್ಲಿ ಯಾವ ಯಾವ ರಸ್ತೆಗಳನ್ನು ಮೇಲ್ದರ್ಜೆಗೆರಿಲಾಗಿದೆ? (ಸಂಪೂರ್ಣ ಇವರ ನೀಡುವುದು)

## ಗ್ರಾಮೀಣ ಗೋದಾಮುಗಳ ಬಳಕೆ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೭೬೫ (೮೮೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಗ್ರಾಮೀಣ ಭಾಂದಾರಣ್ (ಗ್ರಾಮೀಣ ಗೋದಾಮು) ಯೋಜನೆ ಪ್ರಾರಂಭವಾದಗಿನಿಂದ, ಇಲ್ಲಿಯವರೆಗೆ ಎಷ್ಟು ಜನ ಫಲಾನುಭವಿಗಳಿಗೆ ಸಾಲ ಮತ್ತು ಸಹಾಯಧನ ಪಾವತಿಸಲಾಗಿದೆ ; (ಜಿಲ್ಲಾವಾರು, ವರ್ಷಾವಾರು ವ್ಯಕ್ತಿವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಗೋದಾಮುಗಳನ್ನು ನಿಗಧಿಪಡಿಸಲಾದ ಉದ್ದೇಶಗಳಿಗೆ ಮಾತ್ರ ಬಳಸಲಾಗುತ್ತಿದೆಯೇ ;

(ಇ) ಸದರಿ ಗೋದಾಮುಗಳನ್ನು ನಿಗಧಿಪಡಿಸಲಾದ ಉದ್ದೇಶಕ್ಕೆ ಬಳಸದೆ ಅನ್ಯ ಉದ್ದೇಶಗಳಿಗೆ ಬಳಸುತ್ತಿದ್ದಲ್ಲಿ, ಸರ್ಕಾರ ಕೈಗೊಂಡಿಡುವ ಕ್ರಮಗಳೇನು ?

## ಕೊಡಗು ಜಿಲ್ಲೆಯಲ್ಲಿ ತುಂತುರು/ಹನಿ ನೀರಾವರಿಗೆ ನೀಡಿದ ಸಹಾಯಧನ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೭೬೬ (೮೮೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಗಳಿಗೆ ತುಂತುರು/ಹನಿ ನೀರಾವರಿ ಅಳವಡಿಸಲು ಸಹಾಯಧನ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಎಷ್ಟು ರೈತರಿಗೆ ಇಲ್ಲಿಯವರೆಗೆ ಸಹಾಯಧನವನ್ನು ನೀಡಲಾಗಿದೆ;

(ಇ) ಬಾಕಿ ರೈತರಿಗೆ ಸಹಾಯಧನ ಪಾವತಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಕೊಡಗು ಜಿಲ್ಲೆಯಲ್ಲಿ ‘‘ಬ್ರೂಸಿಲೋಸಿಸ್’’ ರೋಗಕ್ಕೆ ತುತ್ತಾದ ಜಾನುವಾರುಗಳು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೭೬೭ (೮೮೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿ ‘‘ಬ್ರೂಸಿಲೋಸಿಸ್’’ ರೋಗಕ್ಕೆ ತುತ್ತಾಗಿರುವ ಜಾನುವಾರುಗಳ ಸಂಖ್ಯೆ ಎಷ್ಟು ;

(ಆ) ಸದರಿ ಜಾನುವಾರುಗಳ ಚಿಕಿತ್ಸೆಗೆ ಸರ್ಕಾರ ಕೈಗೊಂಡಿರುವ ಚಿಕಿತ್ಸಾ ಕ್ರಮಗಳೇನು;

(ಇ) ಸದರಿ ರೋಗವು ಮನುಷ್ಯರಿಗೆ ಹಾಗೂ ಕಾಡು ಪ್ರಾಣಿಗಳಿಗೆ ಹರಡದಂತೆ ಕೈಗೊಂಡಿರುವ ಕ್ರಮಗಳೇನು ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಸುವರ್ಣ ವಿಧಾನಸೌಧ, ಬೆಳಗಾವಿ, ಪಿ7, ಕಾ.ಸೂ. , ಪ್ರತಿಗಳು 1500